MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 276 | ಮಂಗಳವಾರ : 19-08-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 276 | TUESDAY : 19-08-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಹೆಚ್ಚುತ್ತಿರುವ ಹೃದಯಾಘಾತಗಳ ಕುರಿತು ಜನ ಆತಂಕಕ್ಕೊಳಗಾಗಬಾರದು : ಶರಣಪ್ರಕಾಶ್ ಪಾಟೀಲ್

**ಬೆಂಗಳೂರು,ಆ.18–** ರಾಜ್ಯದಲ್ಲಿ ಹೆಚ್ಚುತ್ತಿರುವ ಹೃದಯಾಘಾತಗಳಿಗೆ ಜನತೆ ಅನಗತ್ಯವಾಗಿ ಗೊಂದಲಕ್ಕೆ ಒಳಗಾಗಬಾರದು. ವ್ಯಾಯಾಮ, ಪ್ರಾಣಾಯಾಮ, ಆಹಾರಪದ್ಧತಿ ಹಾಗೂ ಜೀವನ ಶೈಲಿಯನ್ನು ಬದಲಾವಣೆ ಮಾಡಿದರೆ ಯಾವುದೇ ಸಮಸ್ಯೆ ಬರುವುದಿಲ್ಲ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಜನತೆಗೆ ಧೈರ್ಯ ತುಂಬಿದ್ದಾರೆ.

ಕಾಂಗ್ರೆಸ್ ಸದಸ್ಯ ದಿನೇಶ್ ಗೂಳಿಗೌಡ ಅವರ ಪ್ರಶ್ನೆ ಉತ್ತರಿಸಿದ ಅವರು, ಇತ್ತೀಚೆಗೆ ಹೃದಯಾಘಾತ, ಪ್ರಕರಣಗಳ ಸಂಖ್ಯೆ ಹೆಚ್ಚಳದ ಆತಂಕ ಎಲ್ಲರಲ್ಲೂ ಮನೆ ಮಾಡಿದೆ. ಜಯದೇವ ಆಸ್ಪತ್ರೆಯಲ್ಲಿ ಜನರು ಪ್ರತಿನಿತ್ಯ ಬಂದು ಹೃದಯ ತಪಾಸಣೆ ಮಾಡಿಸಿಕೊಳ್ಳುತ್ತಿದ್ದಾರೆ. ಇದರ ಪ್ರಮಾಣ ಶೇ.25ರಷ್ಟು ಏರಿಕೆಯಾಗಿದೆ ಎಂದು ಮಾಹಿತಿ ನೀಡಿದರು.

ವಿಶೇಷವಾಗಿ ಹಾಸನ ಜಿಲ್ಲೆಯಲ್ಲಿ ಹೃದಯಘಾತಗಳ ಸಂಖ್ಯೆ ಹೆಚ್ಚಳವಾಗಿದೆ ಎಂಬ ಆತಂಕ ಜನರಲ್ಲಿ ಮೂಡಿದೆ. ಇದು ತಪ್ಪು ಗ್ರಹಿಕೆ. ವಾಸ್ತವವಾಗಿ ಹಿಂದಿನ ವರ್ಷಗಳಿಗೆ ಹೋಲಿಸಿದರೆ ಸರಾಸರಿ ಪ್ರಮಾಣದಲ್ಲಿ ಯಾವುದೇ ವ್ಯತ್ಯಾಸವಾಗಿಲ್ಲ. ಶೇ.5ರಿಂದ 6ರಷ್ಟು ಪ್ರಕರಣಗಳು ಹೃದಯಾಘಾತಕ್ಕೆ ಸಂಬಂಧಿಸಿದವು. ಈ ವರ್ಷವು ಇಷ್ಟೆ ಪ್ರಮಾಣದಲ್ಲಿ ಇದೆ ಎಂದು ಹೇಳಿದರು.



ಬದಲಾದ ಜೀವನಶೈಲಿ, ಅಧಿಕ ಒತ್ತಡ, ಬೊಜ್ಜು, ಮದ್ಯಪಾನ, ಧೂಮಪಾನ, ಡ್ರಗ್ ಸೇವನೆ, ಕುಟುಂಬದ ಹಿನ್ನಲೆ ಇತ್ಯಾದಿ ಕಾರಣಗಳಿಂದ ಹೃದಯಘಾತಗಳು ಸಂಭವಿಸಿವೆ. ಯಾವುದೋ ಒಂದು ಪ್ರಕರಣವನ್ನು ಆಧಾರವಾಗಿಟ್ಟುಕೊಂಡು ಜನತೆ ಆತಂಕಕ್ಕೆ ಒಳಗಾಗಬಾರದು ಎಂದು ಸಲಹೆ ಮಾಡಿದರು.

ಕೋವಿಡ್ ನಂತರ ಹೃದಯಘಾತ ಪ್ರಕರಣಗಳು ಹೆಚ್ಚಾಗುತ್ತಿವೆ ಎಂಬ ಗುಮಾನಿಯೂ ಇದೆ. ವಾಸ್ತವವಾಗಿ ಇದಕ್ಕೂ ಅದಕ್ಕೂ ಸಂಬಂಧವೇ ಇಲ್ಲ. ಪ್ರತಿದಿನ ವ್ಯಾಯಾಮ, ಪ್ರಾಣಯಾಮ, ಸರಿಯಾದ ಸಮಯಕ್ಕೆ ನಿದ್ದೆ, ಒತ್ತಡ ಇಲ್ಲದಿರುವುದು, ಖಿನ್ನತೆ ಒಳಗಾಗದೆ ಸಮತೋಲನ ಕಾಯ್ದುಕೊಂಡರೆ(**2ನೇಪುಟಕ್ಕೆ**)

## ತುಂಗಭದ್ರಾ ಡ್ಯಾಂನಿಂದ 1.10 ಲಕ್ಷ ಕ್ಯೂಸೆಕ್ ನೀರು ಹೊರಕ್ಕೆ ನದಿ ಪಾತ್ರದ ಜನರಿಗೆ ಎಚ್ಚರಿಕೆ

**ಹೊಸಪೇಟೆ(ವಿಜಯನಗರ), ಆ.18–** ಹೊಸಪೇಟೆ ಸಮೀಪದ ತುಂಗಭದ್ರಾ ಜಲಾಶಯಕ್ಕೆ ಮೇಲ್ಭಾಗದಿಂದ ನೀರು ಹರಿದು ಬರುತ್ತಿರುವುದರಿಂದ ಸೋಮವಾರ 80 ಸಾವಿರದಿಂದ 1.50 ಲಕ್ಷ ಕ್ಯೂಸೆಕ್ ನೀರು ನದಿಗೆ ಹರಿಸಲು ತುಂಗಭದ್ರಾ ಮಂಡಳಿ ನಿರ್ಧರಿಸಿದ್ದು, ಕೆಳ ಭಾಗದ ಜನರು ಎಚ್ಚರಿಕೆ ವಹಿಸುವಂತೆ ಸೂಚಿಸಿದೆ.

ತುಂಗಾ ಜಲಾಶಯದಿಂದ 75 ಸಾವಿರ ಕ್ಯೂಸೆಕ್, ಭದ್ರಾ ಡ್ಯಾಂ ನಿಂದ 40 ಸಾವಿರ ಕ್ಯೂಸೆಕ್, ವರದಾ ನದಿಯಿಂದ 10 ಸಾವಿರ ಕ್ಯೂಸೆಕ್ ಹಾಗೂ ಜಲಾಶಯದ ಜಲಾನಯನ ಪ್ರದೇಶದಲ್ಲಿ ಮಳೆ ಮುಂದುವರಿದಿದ್ದರಿಂದ 1.10 ಲಕ್ಷ ಕ್ಯೂಸೆಕ್ ನೀರು ಟಿಬಿ ಡ್ಯಾಂಗೆ ಹರಿದು ಬರುತ್ತಿದೆ.

ಜಲಾಶಯದ ಒಟ್ಟು 1633 ಅಡಿ ಪೈಕಿ 1625.57 ಅಡಿಗೆ ನೀರು ತಲುಪಿದೆ.




105.788 ಅಡಿ ಟಿಎಂಸಿ ಗರಿಷ್ಠ ಸಂಗ್ರಹದಲ್ಲಿ ಸದ್ಯ 78.372 ಅಡಿ ಟಿಎಂಸಿ ನೀರು ಸಂಗ್ರಹಿಸಲಾಗಿದೆ. ಕಳೆದ ವರ್ಷ 19ನೇ ಕ್ರಸ್ಟ್ ಗೇಟ್ ಕೊಚ್ಚಿ ಹೋಗಿದ್ದು, ಈ ಬಾರಿ ಇತರೆ 7 ಕ್ರಸ್ಟ್ ಗೇಟ್‌ಗಳು ಬಾಗಿರುವುದರಿಂದ(ಜಾಮ್) ಮುಂಜಾಗ್ರತಾ ಕ್ರಮವಾಗಿ 80 ಅಡಿ ಟಿಎಂಸಿ ನೀರು ಸಂಗ್ರಹಕ್ಕೆ ಟಿಬಿ ಬೋರ್ಡ್ ನಿರ್ಧರಿಸಿದೆ. ಹೀಗಾಗಿ ಇದೀಗ ಜಲಾಶಯಕ್ಕೆ ದಖಲಾಗುತ್ತಿರುವ ಲಕ್ಷಾಂತರ ಕ್ಯೂಸೆಕ್ ನೀರನ್ನು ಯಥಾವತ್ತಾಗಿ ನದಿಗೆ ಹರಿಸಲಾಗುತ್ತಿದೆ.

## 42 ಸಾವಿರ ಮನೆಗಳ ವಿತರಣೆಗೆ ಕ್ರಮ

**ಬೆಂಗಳೂರು, ಆ.18–** ಬರೋಬ್ಬರಿ 42,345 ಮನೆಗಳನ್ನು ಫಲಾನುಭವಿಗಳಿಗೆ ಹಸ್ತಾಂತರಿಸಲು ಮುಂದಿನ ತಿಂಗಳು ಬೃಹತ್ ಸಮಾರಂಭ ನಡೆಸಲಾಗುವುದು ಎಂದು ವಸತಿ ಸಚಿವ ಜಮೀರ್ ಅಹ್ಮದ್ ಖಾನ್ ಹೇಳಿದ್ದಾರೆ.

ವಿಧಾನಸಭೆಯಲ್ಲಿಂದು ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ ಸದಸ್ಯ ಸಿದ್ದು ಪಾಟೀಲ್ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ ಸರ್ಕಾರ ಕಳೆದ ವರ್ಷವೇ 36,789 ಮನೆಗಳನ್ನು ಒದಗಿಸಿದ್ದು, ಮತ್ತೆ 42,345 ಮನೆಗಳನ್ನು ಫಲಾನುಭವಿಗಳಿಗೆ ಹಸ್ತಾಂತರಿಸುವುದಕ್ಕೆ ಸಜ್ಜಾಗಿದೆ.

ಜೂನ್ ಅಥವಾ ಜುಲೈನಲ್ಲಿ ಹುಬ್ಬಳ್ಳಿಯಲ್ಲಿ ದೊಡ್ಡ ಸಮಾವೇಶ ನಡೆಸಿ ಈ ಮನೆಗಳನ್ನು ಹಂಚಬೇಕೆಂಬ ನಿರ್ಧಾರಕ್ಕೆ ಬರಲಾಗಿತ್ತು. ಆದರೆ ಹೊಸಪೇಟೆಯಲ್ಲೇ ಸರ್ಕಾರದ ಎರಡನೇ ವರ್ಷದ ಸಾಧನಾ



ಸಮಾವೇಶ ನಡೆಸಬೇಕು ಎಂದು ಮುಖ್ಯಮಂತ್ರಿ ಅವರು ಸೂಚಿಸಿದ ಕಾರಣ ಮನೆ ಹಂಚಿಕೆ ಕಾರ್ಯಕ್ರಮ ಮುಂದೂಡಿಕೆಯಾಗಿದೆ, ಅದನ್ನು ಮುಂದಿನ ತಿಂಗಳು ನಡೆಸಲಾಗುವುದು ಎಂದು ಅವರು ಹೇಳಿದರು.

ಸರ್ಕಾರ ಬಡವರ ಮೇಲಿನ ನಿಜವಾದ ಕಾಳಜಿಯನ್ನು ಪ್ರದರ್ಶಿಸಿದೆ ಹಾಗೂ 2026ರ ಅಂತ್ಯದೊಳಗೆ 2.30 ಲಕ್ಷ ಮನೆಗಳನ್ನು ನೀಡಲಿದ್ದೇವೆ ಎಂದ ಅವರು, 2013 ರಿಂದ 2023 ರವರೆಗೆ ಬಡ ಕುಟುಂಬಗಳಿಗೆ 1.82 ಲಕ್ಷ ಮನೆ ನಿರ್ಮಾಣ ಯೋಜನೆ ರೂಪಿಸಲಾಗಿತ್ತು.

ಫಲಾನುಭವಿಗಳ ವಂತಿಗೆ ಪಾವತಿ ಕಷ್ಟವಾಗಿ ಮನೆಗಳು ಅರ್ಧ ಕ್ಕೆ ನಿಂತಿತ್ತು. ಮುಖ್ಯಮಂತ್ರಿ ಯವರಿಗೆ ಸಮಸ್ಯೆ ಮನವರಿಕೆ ಮಾಡಿಕೊಟ್ಟು ಫಲಾನುಭವಿಗಳ ವಂತಿಗೆ ತಲಾ ನಾಲ್ಕು ಲಕ್ಷ ರೂ. ಸರ್ಕಾರವೇ ಭರಿಸುವ ತೀರ್ಮಾನ ಕೈಗೊಂಡು ಮನೆ ಪೂರ್ಣ ಗೊಳಿಸಲಾಗುತ್ತಿದೆ ಎಂದು ಹೇಳಿದರು.

ಬೀದರ್ ಜಿಲ್ಲೆಯ ಹುಮನಾಬಾದ್ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಚಿಡಗುಪ್ಪಾ ಪಟ್ಟಣದಲ್ಲಿ ಕೊಳಗೇರಿ ಅಭಿವೃದ್ಧಿ ಮಂಡಳಿ ವತಿಯಿಂದ 23ನೇ ಸಾಲಿನಲ್ಲಿ ಒಟ್ಟು 545 ಮನೆಗಳ ಹಂಚಿಕೆಯಾಗಿದ್ದು, ಅದರಂತೆ ಮುಂದಿನ ತಿಂಗಳ 150 ಮನೆಗಳನ್ನು ಹಸ್ತಾಂತರ ಮಾಡಲಾಗುವುದು ಎಂದು ಸಚಿವರು ತಿಳಿಸಿದರು.

## ರಸ್ತೆ ಗುಂಡಿ ಮುಚ್ಚಿದ 'ಜಯ ಕರ್ನಾಟಕ' ಸಂಘಟನೆ

**ಯುವ ಮಾರ್ಗ ಸುದ್ದಿ**

**ದೇವದುರ್ಗ,ಆ.18–**ಇತ್ತೀಚೆಗೆ ಸುರಿದ ಭಾರಿ ಮಳೆಯಿಂದಾಗಿ ದೇವದುರ್ಗ ನಗರದ ಕೆಲವು ರಸ್ತೆಗಳು ಹದಗೆಟ್ಟಿದ್ದು, ವಾಹನ ಸವಾರರು ಹಾಗೂ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗಿತ್ತು. ಈ ಸಮಸ್ಯೆಯನ್ನು ಮನಗಂಡ ಜಯ ಕರ್ನಾಟಕ ಸಂಘಟನೆಯ ದೇವದುರ್ಗ ಘಟಕವು ಸ್ವಯಂಪ್ರೇರಿತವಾಗಿ ರಸ್ತೆ ದುರಸ್ತಿ ಕಾರ್ಯಕ್ಕೆ ಮುಂದಾಗಿದೆ.

ಸಂಘಟನೆಯ ಜಿಲ್ಲಾಧ್ಯಕ್ಷ ಎಸ್. ಶಿವಕುಮಾರ್ ಯಾದವ್ ಅವರ ನಿರ್ದೇಶನದ ಮೇರೆಗೆ, ತಾಲೂಕು ಅಧ್ಯಕ್ಷ ಯಲ್ಲಗೌಡ ಕೆ. ಇರಬಗೇರ ಮತ್ತು ನಗರ ಘಟಕದ ಅಧ್ಯಕ್ಷ ಅಮರೇಶ್ ಚೌಹಾಣ್ ಅವರ ನೇತೃತ್ವದಲ್ಲಿ ಈ ಕಾರ್ಯ ನಡೆಯಿತು. ಕಳೆದ 7–8 ದಿನಗಳಿಂದ ನಿರಂತರ ಮಳೆಯಿಂದಾಗಿ ರಸ್ತೆಗಳಲ್ಲಿ ದೊಡ್ಡ ಹೊಂಡಗಳು ಬಿದ್ದಿದ್ದವು.



ಸಾರ್ವಜನಿಕರ ಹಿತದೃಷ್ಟಿಯಿಂದ ಜಯ ಕರ್ನಾಟಕ ಸಂಘಟನೆಯ ಪದಾಧಿಕಾರಿಗಳು ಮರಂ ಹಾಕಿ ರಸ್ತೆ ಗುಂಡಿಗಳನ್ನು ಮುಚ್ಚುವ ಮೂಲಕ ನಾಗರಿಕ ಸೇವೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಂಘಟನೆಯ ವಿವಿಧ ಪದಾಧಿಕಾರಿಗಳಾದ ಮಹಮ್ಮದ್ ಮುಸ್ತಫ, ಬಸವರಾಜ್ ಗೋಸಲ್, ಮಲ್ಲಪ್ಪ ಬೆಣಕಲ್, ಹೇಮರೆಡ್ಡಿ ಜಾಧವ್, ರಂಗಯ್ಯ ಪೊಲೀಸ್ ಪಾಟೀಲ್, ಅಲ್ತಾಫ್, ರಂದು ನಾಯಕ, ಮರಿಗೆಯ್ಯ ನಾಯಕ, ಜುಬಿರ್, ಆರಿಫ್, ಸಾಬಗೌಡ, ಮತ್ತು ಅಬ್ದುಲ್ ಅಜಿತ್ ಉಪಸ್ಥಿತರಿದ್ದರು. ಸಂಘಟನೆಯ ಈ ಕಾರ್ಯಕ್ಕೆ ಸ್ಥಳೀಯರಿಂದ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ.

## ರಾಜ್ಯದಲ್ಲಿ ಹೊಸ ತಾಲ್ಲೂಕು ರಚನೆಯಿಲ್ಲ

**ಬೆಂಗಳೂರು, ಆ. 18–** ರಾಜ್ಯದಲ್ಲಿ ಹೊಸ ತಾಲ್ಲೂಕುಗಳನ್ನು ಸದ್ಯಕ್ಕೆ ರಚನೆ ಮಾಡದಿರಲು ತೀರ್ಮಾನ ಕೈಗೊಳ್ಳಲಾಗಿದೆ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ವಿಧಾನಸಭೆಯಲ್ಲಿಂದು ಹೇಳಿದರು.

ಪ್ರಶ್ನೋತ್ತರ ಅವಧಿಯಲ್ಲಿ ಕಾಂಗ್ರೆಸ್‌ನ ರಘುಮೂರ್ತಿರವರ ಪ್ರಶ್ನೆಗೆ ಉತ್ತರಿಸಿದ ಅವರು, 2009 ರಲ್ಲಿ ಎಂ.ಬಿ. ಪ್ರಕಾಶ್ ಸಮಿತಿಯು ಹೊಸ ತಾಲ್ಲೂಕುಗಳನ್ನು ರಚಿಸುವ ಸಂಬಂಧ ಸರ್ಕಾರಕ್ಕೆ ಶಿಫಾರಸ್ಸು ಮಾಡಿತ್ತು. ಅದರಲ್ಲಿ ಪರಶುರಾಮಪುರ ಹೋಬಳಿ ಕೇಂದ್ರವನ್ನು ತಾಲ್ಲೂಕು ಮಾಡುವಂತೆ ಘೋಷಿಸಿತ್ತು. ಆ ನಂತರ ಕಳೆದ ಸರ್ಕಾರದಲ್ಲಿ 63 ಹೊಸ ತಾಲ್ಲೂಕುಗಳನ್ನು ಘೋಷಣೆ ಮಾಡಲಾಗಿತ್ತು. ಅದರಲ್ಲಿ ಪರಶುರಾಮಪುರ ಇರಲ್ಲಿಲ. ಅಷ್ಟೇ ಅಲ್ಲ, ಎಂ.ಬಿ. ಪ್ರಕಾಶ್ ಸಮಿತಿಯ ಶಿಫಾರಸ್ಸಿನ ಅನ್ವಯವೂ ಹೊಸ ತಾಲ್ಲೂಕುಗಳ ಘೋಷಣೆ ಆಗಲಿಲ್ಲ ಎಂದರು.

ಈ ಹಿಂದೆ ಘೋಷಣೆಯಾಗಿದ್ದ ಹೊಸ ತಾಲ್ಲೂಕುಗಳಲ್ಲಿ ಹೋಬಳಿ ಕೇಂದ್ರವೂ ಆಗಿರದ ಪ್ರದೇಶವನ್ನು(**2ನೇಪುಟಕ್ಕೆ**)

## ಶ್ರೀವಿರೂಪಾಕ್ಷೇಶ್ವರ ಸಹಕಾರಿಗೆ 3.34 ಕೋಟಿ ನಿವ್ವಳ ಲಾಭ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಆ.18–** ಪಟ್ಟಣದ ಶ್ರೀ ವಿರೂಪಾಕ್ಷೇಶ್ವರ ಸಹಕಾರಿ ಸೌಧದಲ್ಲಿ ನಡೆದ ಶ್ರೀ ವಿರೂಪಾಕ್ಷೇಶ್ವರ ಪತ್ತಿನ ಸೌಹಾರ್ದ ಸಹಕಾರಿ ಸಂಘದ 2024–25 ನೇ ಸಾಲಿನ ವಾರ್ಷಿಕ ಮಹಾಸಭೆಯನ್ನು ಉದ್ಘಾಟಿಸಿ ಸಹಕಾರಿಯ ಅಧ್ಯಕ್ಷರಾದ ಕಲ್ಮಠ ಶ್ರೀವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ಸಹಕಾರಿ ಸಂಸ್ಥೆಗಳು ಯಶಸ್ವಿಯಾಗಬೇಕಾದರೆ ಸಹಕಾರಿಯ ಸದಸ್ಯರು ಹಾಗೂ ಆಡಳಿತ ಮಂಡಿಯವರು ಪರಸ್ಪರ ಸಹಕಾರದಿಂದ ಇದ್ದಾಗ ಮಾತ್ರ ಸಾಧ್ಯವಾಗುತ್ತದೆ. ಶ್ರೀ ವಿರೂಪಾಕ್ಷೇಶ್ವರ ಪತ್ತಿನ ಸೌಹಾರ್ದ ಸಹಕಾರಿಯು ತನ್ನ ಸದಸ್ಯರಿಗೆ ನಿರಂತರವಾಗಿ ಆರ್ಥಿಕ ಅಗತ್ಯಗಳಿಗೆ ಸ್ಪಂದಿಸುತ್ತ ಅಗತ್ಯವಿದ್ದಾಗ ಆರ್ಥಿಕ ನೆರವನ್ನು ನೀಡುವ ಮೂಲಕ ಸದಸ್ಯರ ಅಭಿವೃದ್ದಿಗೆ ಶ್ರಮಿಸುತ್ತಿದೆ ಸಹಕಾರಿಯು ಅನೇಕ ಸಮಾಜಿಕ ಚಟುವಟಿಕೆಗಳಲ್ಲಿಯು ಕೂಡ ಸಕ್ರಿಯವಾಗಿ ಭಾಗಿಯಾಗಿದ್ದು ಅನೇಕ ಆನಾಥ ಶ್ರಮಗಳಿಗೆ ಅಗತ್ಯವಿರುವ ನೆರವನ್ನು ನೀಡುತ್ತ ಬಂದಿದೆ.ಶಾಲೆಗಳಿಗೆ ಕೂಡ ಮೂಲಸೌಲಭ್ಯ ಕಲ್ಪಿಸುತ್ತಿದೆ. ಈ ಸಾಲಿನಲ್ಲಿ ಸಹಕಾರಿ 11,228 ಸದಸ್ಯರನ್ನು ಹೊಂದಿದ್ದು98.75 ಲಕ್ಷ ಶೇರು ಬಂಡವಾಳ,108 ಕೋಟಿ ಠೇವಣಿ ಹೊಂದಿದೆ.24.61 ಕೋಟಿ ವಿವಿಧ ನಿಧಿಗಳನ್ನು ಹೊಂದಿದೆ.ಸಹಕಾರಿಯ ಸದಸ್ಯರಿಗೆ 101 ಕೋಟಿಯಷ್ಟು ಸಾಲವನ್ನು ವಿತರಿಸಲಾಗಿದೆ. ಸಹಕಾರಿಯು ಈ ಸಾಲಿನಲ್ಲಿ 3ಕೋಟಿ 34 ಲಕ್ಷ ನಿವ್ವಾಳ ಲಾಭವನ್ನು ಹೊಂದಿದೆ ಎಂದು ತಿಳಿಸಿದರು.




ಸಹಕಾರಿಯ ಸಿ.ಇ.ಓ. ಶಂಕರಾನಂದ ವಾತನಾಡಿ ಸಹಕಾರಿಯ ಮುಖ್ಯ ಕಚೇರಿಯ ಕಟ್ಟಡವನ್ನು 4.57 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿದ್ದು . ಮುಂದಿನ ದಿನಗಳಲ್ಲಿ ಸಹಕಾರಿಯ ಎಲ್ಲಾ ಶಾಖೆಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲಾಗುವುದು. ಸಹಕಾರಿಯ ಶಾಖೆಗಳಲ್ಲಿ ಇ.ಸ್ಟಾಂಪ್ ಸೇವೆಯನ್ನು ಪ್ರಾರಂಭಿಸಲಾಗುವುದು, ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಮಕ್ಕಳ ನಾಟಕೋತ್ಸವ, ಮಕ್ಕಳಿಗೆ ವಿವಿಧ ಕ್ರೀಡೆಗಳ ಬಗ್ಗೆ ತರಬೇತಿ ನೀಡಲಾಗುವುದು, ಸೇರಿದಂತೆ ಅನೇಕ ಸಮಾಜಿಕ ಕಾರ್ಯ ಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಹಕಾರಿಯ ಹಿರಿಯ ಸದಸ್ಯರನ್ನು ಹಾಗೂ ಯೋಗಗುರು ಮೌನೇಶ ಪೊತ್ನಾಳ್‌ರನ್ನು ಸನ್ಮಾನಿಸಿ ಗೌರವಿಸಲಾಯಿತು. ಹೊಸಪೇಟೆಯ ವಿಕಾಸ ಸೌಹಾರ್ದ ಬ್ಯಾಂಕಿನ ಅಧ್ಯಕ್ಷರಾದ ವಿಶ್ವನಾಥ ಸಿ.ಹಿರೇಮಠ ಮಾತನಾಡಿದರು.

ಕಾರ್ಯಕ್ರಮದಲ್ಲಿ ಸಹಕಾರಿಯ ಸದಸ್ಯರು ಹಾಗೂ ನಿರ್ದೇಶಕರು,ಸಿಬ್ಬಂದಿಗಳು ಭಾಗವಹಿಸಿದರು.

## ಹದಗೆಟ್ಟ ಪೋತ್ನಾಳ –ಉದ್ಬಾಳ್ ರಸ್ತೆ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಆ.18–**ಪೋತ್ನಾಳ ಗ್ರಾಮದಿಂದ ಉದ್ಬಾಳ್ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯು ಸಂಪೂರ್ಣವಾಗಿ ಹದಗೆಟ್ಟು ಹೋಗಿದೆ. ಇದರಿಂದಾಗಿ ವಾಹನ ಸವಾರರು ಹಾಗೂ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ಈ ರಸ್ತೆಯನ್ನು ಕೂಡಲೇ ಡಾಂಬರೀಕರಣ ಮಾಡಬೇಕೆಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಪೋತ್ನಾಳ–ಉದ್ಬಾಳ್ ರಸ್ತೆಯು ಹಾಳಾಗಿದ್ದು, ಎಲ್ಲೆಂದರಲ್ಲಿ ದೊಡ್ಡ ದೊಡ್ಡ ಹೊಂಡಗಳು ನಿರ್ಮಾಣವಾಗಿವೆ. ಈ ರಸ್ತೆಯಲ್ಲಿ ಪ್ರತಿದಿನ ನೂರಾರು ವಾಹನಗಳು ಓಡಾಡುತ್ತವೆ. ಶಾಲೆಗೆ ಹೋಗುವ ಮಕ್ಕಳು, ಕೆಲಸಕ್ಕೆ ಹೋಗುವ ಕಾರ್ಮಿಕರು ಸೇರಿದಂತೆ ದಿನನಿತ್ಯ ಪ್ರಯಾಣಿಸುವ ಜನರು ಈ ರಸ್ತೆಯಿಂದಾಗಿ ಸಮಸ್ಯೆ ಎದುರಿಸುತ್ತಿದ್ದಾರೆ. ಕೆಲವು ಮಕ್ಕಳು ನಡೆದುಕೊಂಡು ಹೋಗುವಾಗ ಹೊಂಡ ಗಳಲ್ಲಿ ಬಿದ್ದು ಸಣ್ಣಪುಟ್ಟ ಗಾಯಗಳಾಗಿವೆ. ಇದರಿಂದ ಪೋಷಕರು ಆತಂಕದಲ್ಲಿದ್ದಾರೆ.

ಈ ರಸ್ತೆಯ ದುಸ್ಥಿತಿಯಿಂದಾಗಿ ಸಾರ್ವಜನಿಕರು ಆಕ್ರೋಶಗೊಂಡಿದ್ದಾರೆ. ಈ ಬಗ್ಗೆ ಅನೇಕ ಬಾರಿ ಅಧಿಕಾರಿಗಳಿಗೆ ಮತ್ತು ಜನಪ್ರತಿನಿಧಿಗಳಿಗೆ ಮನವಿ ಸಲ್ಲಿಸಿದ್ದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಗ್ರಾಮಸ್ಥರು ದೂರಿದ್ದಾರೆ. ಕೂಡಲೇ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಈ ರಸ್ತೆಯನ್ನು ಡಾಂಬರೀಕರಣ ಮಾಡಲು ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಅಗ್ರಹಿಸಿದ್ದಾರೆ.

## ಮೊದಲನೇಯ ಪುಟದಿಂದ

# ಹೆಚ್ಚುತ್ತಿರುವ ಹೃದಯಾಘಾತಗಳ ಕುರಿತು ಜನ ಆತಂಕಕ್ಕೊಳಗಾಗಬಾರದು : ಶರಣಪ್ರಕಾಶ್ ಪಾಟೀಲ್

ಯಾವುದೇ ಆರೋಗ್ಯ ಸಮಸ್ಯೆಗಳು ಬರುವುದಿಲ್ಲ ಎಂದು ಪಾಟೀಲ್ ಸಲಹೆ ಕೊಟ್ಟರು.ಈ ಪ್ರಕರಣಗಳ ಕುರಿತಂತೆ ಜಯದೇವ ಹೃದ್ರೋಗ ಸಂಸ್ಥೆಯ ನಿರ್ದೇಶಕರಾದ ಡಾ.ರವೀಂದ್ರ ನೇತೃತ್ವದಲ್ಲಿ ಸಮಿತಿ ರಚಿಸಲಾಗಿತ್ತು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಕಾರ್ಯಪಡೆಯನ್ನು ಸಹ ರಚಿಸಿತ್ತು. ಸರ್ಕಾರಕ್ಕೆ ನೀಡಿರುವ ವರದಿಯಲ್ಲಿ ಜನರ ಊಹೆಗೂ ಇದಕ್ಕೂ ಸಂಬಂಧವಿಲ್ಲ ಎಂದು ಹೇಳಿದ್ದಾರೆ. ಜನರು ಮೊದಲು ವದಂತಿಗಳಿಗೆ ಕಿವಿಗೊಡುವುದನ್ನು ನಿಲ್ಲಿಸಬೇಕು ಎಂದು ಮನವಿ ಮಾಡಿದರು.

ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ: ರಾಜ್ಯದ ಎಲ್ಲಾ ಸರ್ಕಾರಿ ಆಸ್ಪತ್ರೆಗಳ ಜೊತೆ ಕಡ್ಡಾಯವಾಗಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ತೆರೆಯಬೇಕೆಂಬುದು ನಮ ಸರ್ಕಾರದ ಸಿದ್ದಾಂತವಾಗಿದೆ. ಈಗಾಗಲೇ ಅನೇಕ ಜಿಲ್ಲೆಗಳಲ್ಲಿ ಈ ಆಸ್ಪತ್ರೆಗಳು ಕಾರ್ಯಾರಂಭ ಮಾಡಿವೆ.ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಎಲ್ಲಾ ಜಿಲ್ಲಾಸ್ಪತ್ರೆಗಳಲ್ಲಿ ಕಡ್ಡಾಯವಾಗಿ ಸ್ಥಾಪನೆ ಮಾಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸೂಚನೆ ಕೊಟ್ಟಿದ್ದಾರೆ.

ಈ ನಿಯಮವನ್ನು ನಾವು ಈಗಾಗಲೇ ಅಳವಡಿಸಿಕೊಂಡು ಕಾರ್ಯಾರಂಭ ಮಾಡಿದ್ದೇವೆ. ಎಲ್ಲಾ ಜಿಲ್ಲೆಗಳಲ್ಲೂ ಸೂಪರ್ ಸ್ಪೆಷಾಲಿಟಿ ಜೊತೆಗೆ ಟ್ರಾಮಾ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು ಎಂದರು.

ಬೆಂಗಳೂರು–ಮೈಸೂರು, ಕಲಬುರಗಿ,ಹುಬ್ಬಳ್ಳಿಯ ಜಯದೇವ ಹೃದ್ರೋಗ ಸಂಸ್ಥೆಯಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಆರಂಭವಾಗಿದೆ. ಇದೇ ರೀತಿ ಬಾಗಲಕೋಟೆ, ಯಾದಗಿರಿ, ರಾಯಚೂರಿನಲ್ಲೂ ಶೀಘ್ರದಲ್ಲೆ ಕಾರ್ಯಾರಂಭ ಮಾಡಲಾಗುವುದು. ಬೀದರ್, ಕೊಪ್ಪಳ, ಬೆಳಗಾವಿಯಲ್ಲಿ ಎರಡರಿಂದ ಮೂರು ತಿಂಗಳೊಳಗೆ ಈ ಆಸ್ಪತ್ರೆಗಳು ಲೋಕಾರ್ಪಣೆಗೊಳ್ಳಲಿವೆ ಎಂದು ತಿಳಿಸಿದರು.

# ರಾಜ್ಯದಲ್ಲಿ ಹೊಸ ತಾಲ್ಲೂಕು ರಚನೆಯಿಲ್ಲ

ಹೊಸ ತಾಲ್ಲೂಕಾಗಿ ಗ್ರಾಮ ಪಂಚಾಯ್ತಿ ಕೇಂದ್ರವನ್ನು ಹೊಸ ತಾಲ್ಲೂಕಾಗಿ ಘೋಷಿಸಿರುವುದೂ ಇದೆ. ಹೀಗೆ ವೈಜ್ಞಾನಿಕವಾಗಿ ಸಾಧುವಲ್ಲದ ತಾಲ್ಲೂಕುಗಳು ಘೋಷಣೆಯಾಗಿವೆ. ಹೋಬಳಿ ಇರದ ಕೇಂದ್ರವನ್ನು ತಾಲ್ಲೂಕು ಮಾಡಿದ್ದರೂ ಅದನ್ನು 2 ತಾಲ್ಲೂಕುಗಳಾಗಿ ಘೋಷಣೆ ಮಾಡುವಂತೆಯೂ ಬೇಡಿಕೆ ಇದೆ ಎಂದರು.

ಕಳೆದ ಸರ್ಕಾರದಲ್ಲಿ ಘೋಷಣೆಯಾದ 63 ತಾಲ್ಲೂಕುಗಳಲ್ಲಿ 14 ತಾಲ್ಲೂಕುಗಳು ಮಾತ್ರ ಆಡಳಿತಸೌಧ ಮಂಜೂರಾಗಿತ್ತು. ನಮ್ಮ ಸರ್ಕಾರದ ಬಂದ ಮೇಲೆ ಉಳಿದ 49 ತಾಲ್ಲೂಕುಗಳಲ್ಲೂ ಪ್ರಜಾಸೌಧ ನಿರ್ಮಾಣಕ್ಕೆ ಮಂಜೂರು ಮಾಡಿದ್ದೇವೆ.

ತಾಲ್ಲೂಕುಗಳ ಘೋಷಣೆ ಮುಖ್ಯವಲ್ಲ, ಅದನ್ನು ಕಾರ್ಯರೂಪಕ್ಕೆ ತರುವುದೂ ಅಷ್ಟೇ ಮುಖ್ಯ ಎಂದರು.

ಈ ಎಲ್ಲ ಬೆಳವಣಿಗೆಗಳನ್ನು ಗಮನದಲ್ಲಿಟ್ಟುಕೊಂಡು ಹೊಸದಾಗಿ ಘೋಷಣೆಯಾಗಿರುವ ತಾಲ್ಲೂಕುಗಳು ಆಡಳಿತ ಸ್ಥಿರತೆ ಹೊಂದುವವರೆಗೂ ಸದ್ಯಕ್ಕೆ ಹೊಸ ತಾಲ್ಲೂಕುಗಳ ಘೋಷಣೆ ಬೇಡ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ಧರಿಸಿದ್ದಾರೆ ಎಂದರು.

ಮುಂದೆ ನಮ್ಮ ಸರ್ಕಾರದ ಅವಧಿಯಲ್ಲೇ ಹೊಸ ತಾಲ್ಲೂಕುಗಳ ಘೋಷಣೆ ಬಗ್ಗೆಯೂ ಪರಿಶೀಲನೆ ನಡೆದಿದೆ. ಐದಾರು ತಾಲ್ಲೂಕುಗಳ ಬೇಡಿಕೆಯೂ ಇದೆ. ಎಲ್ಲವನ್ನು ಗಮನದಲ್ಲಿಟ್ಟುಕೊಂಡು ತೀರ್ಮಾನ ಮಾಡುತ್ತೇವೆ. ಸದ್ಯಕ್ಕಂತೂ ಹೊಸ ತಾಲ್ಲೂಕುಗಳ ರಚನೆ ಇಲ್ಲ ಎಂದು ಅವರು ಹೇಳಿದರು.

# ಶ್ರಾವಣ ಸೋಮವಾರ ಮಹಾಳಪ್ಪಯ್ಯನ ದರ್ಶನ ಪಡೆದ ಭಕ್ತ ಸಾಗರ

**ಕಮಲನಗರ,ಅ.18–** ಕಡೆಯ ಶ್ರಾವಣ ಮಾಸದ ನಾಲ್ಕನೇ ಸೋಮವಾರ ತಾಲೂಕಿನ ಮಹಾಳಪ್ಪಯ್ಯನ ಮಂದಿರಕ್ಕೆ ಸಾವಿರಾರು ಭಕ್ತರು ಆಗಮಿಸಿ ದರ್ಶನ ಪಡೆದರು.

ದೇವಾಲಯದ ಅರ್ಚಕರು ರುದ್ರಾಭಿಷೇಕ ಮಾಡಿದರು.ಭಕ್ತರು ನಸುಕಿನ ಜಾವ ನಾಲ್ಕು ಗಂಟೆಗೆ ಬಂದು ಮಂದಿರ ಎದುರುಗಡೆ ಹರಿಯುವ ಗಂಗೆಯಲ್ಲಿ ಸ್ನಾನ ಮಾಡಿ ಬಿಲ್ವ ಪತ್ರಿ ತೆಂಗು ಮತ್ತು ಉದ್ದುಕಡ್ಡಿ ಮಹಾಳಪ್ಪಯ್ಯನಿಗೆ ಅರ್ಪಿಸಿ ಭಕ್ತಿಯಿಂದ ಪೂಜೆ ಪುನಸ್ಕಾರ ನೆರವೇರಿಸಿದರು.ಭಕ್ತರು ಹರಕೆ ತೀರಿಸಿದರು.

ಈ ಭಾಗದ ಶ್ರೀ ಸುಕ್ಷೇತ್ರ ಮಂದಿರಗಳಲೊಂದಾದ ಮಹಾಳಪ್ಪಯ್ಯ ಮಂದಿರವೂ ಒಂದು ಐತಿಹಾಸಿಕ ಮತ್ತು

ಪುರಾಣ ಪ್ರಸಿದ್ಧ ಪಡೆದಿರುವ ಈ ಕಾಡು ಪ್ರದೇಶಕ್ಕೆ "ಭಕ್ತಮುಡಿ"ಎಂಬ ಹೆಸರಿನಿಂದ ಪ್ರಸಿದ್ಧಿ ಪಡೆದಿರುವ ಈ ತಾಣಕ್ಕೆ ಭಕ್ತರ



ಉದ್ದನೆಯ ಸಾಲುಗಳು ಸಾಲುಗಟ್ಟಿ ನಿಂತು ದರ್ಶನ್ ಪಡೆದುಕೊಂಡು ಅನ್ನ ಸಾಂಬಾರು ಮತ್ತು ಹುಗ್ಗಿ ಪ್ರಸಾದ ಸ್ವೀಕರಿಸಿದರು.

ತಾಲೂಕಿನ ನಾನಾ ಕಡೆಗಳಿಂದ ಅಲ್ಲದೆ ಮಹಾರಾಷ್ಟ್ರ ಕರ್ನಾಟಕದ ತೆಲಂಗಾಣ ನಾನಾ ಭಾಗಗಳಿಂದ ಆಗಮಿಸಿದ ಭಕ್ತರು ಸ್ನಾನ ಮಾಡಿ ವಿಶೇಷ ಪೂಜೆ ಮಹಾ ಮಂಗಳಾರತಿ ಸೇರಿ ನಾನಾ ಸೇವೆಗಳು ನಡೆದವು.

# ಮದ್ಯವರ್ಜನ ಶಿಬಿರದಿಂದ ಬದುಕುವ ಆತ್ಮಸ್ಥೈರ್ಯ ವೃದ್ಧಿ : ಮಹೇಶ ಪಾಟೀಲ



**ಔರಾದ್ ಅ.18–** ನಶೆಯಲ್ಲಿನ ಅಮಲು ಆರ್ಥಿಕ, ಸಾಮಾಜಿಕ, ದೈವಿಕ, ಸಾಂಸಾರಿಕ ಸ್ಥಾನಮಾನವನ್ನು ನಾಶ ಮಾಡಿ ಅಜ್ಞಾನದಲ್ಲಿ ಮುಳುಗಿಸುತ್ತದೆ.ಇಂತಹ ಕೆಟ್ಟ ವ್ಯಸನಗಳಿಂದ ಮುಕ್ತಿದೊರಕಿಸಿಕೊಡುವ ಶಿಬಿರಗಳನ್ನು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಆಯೋಜಿಸಿ ಬದುಕು ಬಂಗಾರವಾಗಿಸಲು ಶ್ರಮಿಸುತ್ತಿರುವುದು ಅತ್ಯಂತ ಪವಿತ್ರಕಾರ್ಯಗಳಲ್ಲೊಂದಾಗಿದೆ ಎಂದು ತಹಸೀಲ್ದಾರ್ ಮಹೇಶ ಪಾಟೀಲ್ ನುಡಿದರು.

ಪಟ್ಟಣದ ಶ್ರೀ ಸಾಯಿ ಕಲ್ಯಾಣ ಮಂಟಪದಲ್ಲಿ ಶನಿವಾರ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಏರ್ಪಡಿಸಿದ 1966ನೇ ವಿಶೇಷ ಮದ್ಯವರ್ಜನ ಶಿಬಿರಕ್ಕೆ ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ, ಶಿಬಿರದ ಶಿಬಿರಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಚಟಗಳು ಮನುಷ್ಯನನ್ನು ಕುರುಡನ್ನಾಗಿಸುತ್ತವೆ. ಮನುಷ್ಯ ಜೀವನವನ್ನು ಸಂಪೂರ್ಣವಾಗಿ ತನ್ನ ಹಿಡಿತಕ್ಕೆ ಪಡೆದುಕೊಂಡು ಜೀವನದ ಸರ್ವಸ್ವವನ್ನು ಕೆಡಿಸುವ ಶಕ್ತಿ ವ್ಯಸನಕ್ಕಿದೆ. ಮದ್ಯವರ್ಜನ ಶಿಬಿರದಲ್ಲಿ ತನ್ನ ಶಕ್ತಿಯನ್ನು ತಾನೇ ಅರ್ಥಮಾಡಿಕೊಂಡು ಬದುಕುವ ಆತ್ಮ ಸ್ಥೈರ್ಯವನ್ನು ಪಡೆಯಲು ಕಾರ್ಯಕ್ರಮಗಳನ್ನು ರೂಪಿಸುತ್ತಾರೆ. ಇದರಿಂದ ಉತ್ತಮ ಫಲಿತಾಂಶ ಕಾಣಲು ಸಾಧ್ಯವಾಗಿದೆ ಎಂದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಮುರಳಿಧರ ಎಚ್.ಎಲ್ ಮಾತನಾಡಿ, 8 ದಿನಗಳ ಕಾಲ ನಡೆಯುವ ಶಿಬಿರದಲ್ಲಿ ಎಲ್ಲರು ಭಾಗವಹಿಸಬೇಕು. ಅಮಲು ಸೇವನೆ ವಿಶ್ವದ ದೊಡ್ಡ ರೋಗವಾಗಿ ಪರಿಣಮಿಸಿದೆ. ಧರ್ಮಸ್ಥಳ ಮಂಜುನಾಥರ ಆರ್ಶಿವಾದದಿಂದ ಗ್ರಾಮೀಣ ಭಾಗದಲ್ಲಿ ಇಂತಹ ಶಿಬಿರ ಆಯೋಜನೆ ಮಾಡಿ, ಮದ್ಯಪಾನ ಚಟ ಮುಕ್ತರಾಗಿಸುವ ಸಂಕಲ್ಪಮಾಡಿ ಪುಣ್ಯದ ಕಾರ್ಯದಲ್ಲಿ ತೊಡಗಿರುವುದು ಉತ್ತಮ ಸಂಗತಿಯಾಗಿದ್ದು, ಇಂತಹ ಪುಣ್ಯದ ಕಾರ್ಯಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಶಿಬಿರಾರ್ಥಿಗಳು ಪಾಲ್ಗೊಂಡು ಚಟದಿಂದ ಮುಕ್ತಿಪಡೆದು ಉತ್ತಮ ಬದುಕಿಗೆ ಧಾರಿದೀಪವಾಗಬೇಕು ಎಂದರು.

ಶಿಬಿರದಲ್ಲಿ ತಾಪಂ ಸಹಾಯಕ ನಿರ್ದೇಶಕ ಶಿವಕುಮಾರ್ ಘಾಟೆ , ಸುಧಾಕರ್ ಕೊಳ್ಳುರ್, ಕಲ್ಲಪ್ಪ ದೇಶಮುಖ ಮಾತನಾಡಿದರು.

ಶಿಬಿರದಲ್ಲಿ ಔರಾದ್, ಕಮಲನಗರ ತಾಲೂಕಿನ ವಿವಿಧ ಹಳ್ಳಿಗಳಿಂದ 100ಕ್ಕೂ ಹೆಚ್ಚಿನ ಶಿಬಿರಾರ್ಥಿಗಳು ಪಾಲ್ಗೊಂಡಿದ್ದು, ಶಿಬಿರ ಪ್ರಯೋಜನೆ ಪಡೆಯಲಿದ್ದಾರೆ.

ಮದ್ಯವರ್ಜನ ಶಿಬಿರ ವ್ಯವಸ್ಥಾಪನಾ ಸಮಿತಿ ತಾಲೂಕು ಅಧ್ಯಕ್ಷ ಅಶೋಕ ಶೆಂಬೆಳ್ಳಿ ಅಧ್ಯಕ್ಷತೆ ವಹಿಸದರು. ಪಪಂ ಅಧ್ಯಕ್ಷೆ ಸರೂಬಾಯಿ ಘುಳೆ, ಶಿವಾನಂದ ಮೋಕ್ತೆದಾರ್, ಗುಂಡಯ್ಯ ಸ್ವಾಮಿ, ಬಂಡೆಪ್ಪ ಕಂಟೆ, ಶಿವರಾಜ ಅಲಮಾಜೆ, ಶಾಲಿವಾನ ಉದಗಿರೆ, ಶರಣಪ್ಪ ಪಾಟೀಲ್, ರಾಘವೇಂದ್ರ ಗೌಡಾ, ಪ್ರವೀಣ ಕಾರಬಾರಿ, ಶಿವಶರಣಪ್ಪ ವಲ್ಲಾಪೂರೆ, ರಾಜೇಶ, ನಂದಕುಮಾರ್, ಪ್ರೇಶಿಲ್ಲಾ ಡಿಸೋಜಾ, ವಿಲಾಸ ಪೂಜಾರಿ, ಮಲ್ಲಿಕಾರ್ಜುನ ಪಾಟೀಲ್, ಬೀರಪ್ಪ, ಲಕ್ಷ್ಮೀಕಾಂತ, ಸಂತೋಷ ಚಾಂಡೇಶ್ವರೇ, ಸಂದೀಪ್ ಪಾಟೀಲ್, ಆದೇಶ, ಅಂಕುಶ, ಸಂಗೀತಾ, ಪೂಜಾ, ಸುರೇಖಾ, ಭಾರತಿ, ಕಾವೇರಿ, ಮನಿಶಾ ರೆಡ್ಡಿ, ಭೂದೇವಿ ಇತರರಿದ್ದರು.

# ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ



**ಯುವ ಮಾರ್ಗ ಸುದ್ದಿ**

**ಆಳಂದ,ಆ.18–** ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ ಆಳಂದ ತಾಲೂಕಿನ ತಡಕಲ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷ, ಉಪಾಧ್ಯಕ್ಷರ ನೇಮಕ ಪ್ರಕ್ರಿಯೆ ಇತ್ತೀಚಿಗೆ ಜರುಗಿತು.

ನೇಮಕ ಪ್ರಕ್ರಿಯೆಯಲ್ಲಿ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಕ್ಕೆ ತಲಾ ಒಂದೊಂದೆ ನಾಮಪತ್ರಗಳು ಸಲ್ಲಿಕೆಯಾಗಿರುವುದರಿಂದ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ ಅವಿರೋಧವಾಗಿ ಜರುಗಿತು.

ಇತ್ತೀಚಿಗೆ ಜರುಗಿದ ಚುನಾವಣೆಯಲ್ಲಿ 12 ನರ್ದೇಶಕ ಸ್ಥಾನಗಳಲ್ಲಿ ಮಾಜಿ ಶಾಸಕ ಸುಭಾಷ್ ಆರ್ ಗುತ್ತೇದಾರ ಬೆಂಬಲಿತ 11 ಜನ ನಿರ್ದೇಶಕರು ಬಹುಮತದಿಂದ ಆಯ್ಕೆಯಾಗಿದ್ದರು.

ನೂತನ ಅಧ್ಯಕ್ಷರಾಗಿ ಚಂದ್ರಕಾಂತ ಶಿರೋಳೆ, ಉಪಾಧ್ಯಕ್ಷರಾಗಿ ಅಂಕುಶ ಮ್ಯೆಂದೆ ಆಯ್ಕೆಯಾದರು. ನಂತರ ವಿಜಯೋತ್ಸದ ಜರುಗಿತು. ವಿಜಯೋತ್ಸವದಲ್ಲಿ ಮುಖಂಡರಾದ ಶಿವಪುತ್ರಪ್ಪ ಬೆಳ್ಳೆ, ತಿಪ್ಪಯ್ಯ ಗುತ್ತೇದಾರ, ಮಲ್ಲಿಕಾರ್ಜುನ ಮಾನೋಳೆ, ಅನೀಲ ಜಮಾದಾರ ಸೇರಿದಂತೆ ಪ್ರಮುಖರು ಹಾಗೂ ನೂತನ ನಿರ್ದೇಶಕರು ಭಾಗವಹಿಸಿದ್ದರು.

# ರುದ್ರವಾಡಿ: ಬಸವೇಶ್ವರ ಪ್ರತಿಮೆ ಯಥಾಸ್ಥಿತಿ ಕಾಪಾಡಲು ಆಗ್ರಹ

**ಯುವ ಮಾರ್ಗ ಸುದ್ದಿ**



**ಆಳಂದ,ಆ.18–**ರುದ್ರವಾಡಿ ಗ್ರಾಮದಲ್ಲಿ ತೆರವುಗೊಳಿಸಿದ ಸ್ಥಳದಲ್ಲೇ ಪುನ: ಬಸವೇಶ್ವರ ಪ್ರತಿಮೆ ಪ್ರತಿಷ್ಠಾಪಿಸಿ ವಿವಾದ ಇತ್ಯರ್ಥವಾಗುವವರೆಗೆ ಯಥಾಸ್ಥಿತಿ ಕಾಪಾಡುವಂತೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಯುವ ಘಟಕದ ರಾಜ್ಯ ಉಪಾಧ್ಯಕ್ಷ ಶಿವಪ್ರಕಾಶ ಹೀರಾ ಆಳಂದ ತಹಸೀಲದಾರರಿಗೆ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಲಬುರಗಿ ಜಿಲ್ಲೆಯ ಆಳಂದ ತಾಲೂಕಿನ ರುದ್ರವಾಡಿ ಗ್ರಾಮದಲ್ಲಿ ದಿ. 11ನೇ ಆಗಸ್ಟ್ 2025ರಂದು ಗ್ರಾಮದ ಸಾರ್ವಜನಿಕ ಸ್ಥಳದಲ್ಲಿ ಜಗಜ್ಯೋತಿ ಬಸವೇಶ್ವರ ಪ್ರತಿಮೆಯನ್ನು ಪ್ರತಿಷ್ಠಾಪಿಸಲಾಗಿರುತ್ತದೆ. ಆದರೆ ಕೆಲವು ಮತೀಯ ಶಕ್ತಿಗಳು ಗ್ರಾಮದಲ್ಲಿ ಸೌಹಾರ್ದ ವಾತಾವರಣ ಕೆಡಿಸಲು ಈ ಜಾಗಕ್ಕೆ ತಕರಾರು ತೆಗೆದು ಇದು ಅಲ್ಪಸಂಖ್ಯಾತ ಸಮುದಾಯದವರಿಗೆ ಸೇರಿದ ಜಾಗವೆಂದು ಆಕ್ಷೇಪಣೆ ಸಲ್ಲಿಸಿ ಪ್ರತಿಮೆಯನ್ನು ತೆಗೆಯಲು ಅರ್ಜಿ ಸಲ್ಲಿಸಿರುತ್ತಾರೆ. ಸದರಿ ವಿಷಯದ ಕುರಿತು ತಹಸೀಲದಾರರು ಗ್ರಾಮಕ್ಕೆ ಆಗಮಿಸಿ ಎಲ್ಲ ಸಮುದಾಯದವರ ಜೊತೆ ಮಾತುಕತೆ ನಡೆಸಿ ಸದರಿ ಜಾಗವನ್ನು ತಹಸೀಲ ಕಚೇರಿಯಿಂದ ಸರ್ವೆ ಮಾಡಿಸಿ ಸೂಕ್ತ ಕ್ರಮಕೈಗೊಳ್ಳುವುದಾಗಿ ಹೇಳಿ ಹೋಗಿರುತ್ತಾರೆ ಎಂದು ಮಾಹಿತಿ ನೀಡಿದ್ದಾರೆ.

ಆದರೆ ದಿ. 14ನೇ ಆಗಸ್ಟ್ 2025ರ ಗುರುವಾರದಂದು ತಾಲೂಕು ಸರ್ವೆಯರ್ ಅಕ್ಷಯ, ಕಂದಾಯ ನಿರೀಕ್ಷಕ ಅಲ್ಲಾವುದ್ದೀನ್ ಅವರು ಬೆಳಿಗ್ಗೆ 11 ಗಂಟೆಗೆ ಬಂದು ಎಲ್ಲ ಸಮುದಾಯದ ಮುಖಂಡರೊಂದಿಗೆ ಶಾಲೆಯ ಕೋಣೆಯಲ್ಲಿ ಕುಳಿತು ಚರ್ಚಿಸಿದಾಗ ತಾಲೂಕು ಸರ್ವೆಯರ್ ಅವರು ಸರ್ವೆ ಜಾಗದಲ್ಲಿ ಕಟ್ಟಡ ಇರುವುದರಿಂದ ಸಾಕಳಿ( ಚೈನ್) ಮುಖಾಂತರ ಸರ್ವೆ ಬರುವುದಿಲ್ಲ ಎಂದು, ಇನ್ನೊಂದು ವಿಧಾನ ಇರುತ್ತದೆ ಎಂದಾಗ ಮಶೀನ್ ಮುಖಾಂತರ ಸರ್ವೆ ಮಾಡಲು ಬರುತ್ತದೆ ಎಂದು ಹೇಳಿ ಅದಕ್ಕಾಗಿ ಒಂದು ವಾರ ಕಾಲಾವಕಾಶ ಬೇಕು ಎಂದು ಕೇಳಿದಾಗ ಅದಕ್ಕೆ ಎಲ್ಲ ಸಮುದಾಯದವರು ಅವರ ಮಾತಿಗೆ ಒಪ್ಪಿಗೆ ಸೂಚಿಸಿರುತ್ತಾರೆ. ನಂತರ ಅದೇ ದಿನ ಸಾಯಂಕಾಲ 5 ಗಂಟೆಗೆ ತಹಸೀಲದಾರ ಮತ್ತು ಸರ್ಕಲ್ ಇನ್ಸ್‌ಪೆಕ್ಟರ್ ಅವರು ಯಾರಿಗೂ ತಿಳಿಸದೇ ಏಕಾಏಕಿ ಗ್ರಾಮಕ್ಕೆ ಬಂದು ಪ್ರತಿಮೆಯನ್ನು ತೆರವುಗೊಳಿಸಿ ಗ್ರಾಮ ಪಂಚಾಯತಿ ಕಚೇರಿಯಲ್ಲಿ ಇಟ್ಟಿರುತ್ತಾರೆ ಇದು ತಹಸೀಲದಾರರು ಹಾಗೂ ಸರ್ಕಲ್ ಇನ್ಸ್‌ಪೆಕ್ಟರ್ ಅವರು ಎಲ್ಲ ಸಮುದಾಯದ ಜನರಿಗೆ ಮಾಡಿದ ದ್ರೋಹವಾಗಿರುತ್ತದೆ ಎಂದು ದೂರಿದ್ದಾರೆ.

ಸದರಿ ಜಾಗದ ಸರ್ವೆ ಸಂಪೂರ್ಣವಾಗಿ ಇತ್ಯರ್ಥವಾಗುವವರೆಗೆ ಬಸವೇಶ್ವರ ಪ್ರತಿಮೆಯನ್ನು ಪ್ರತಿಷ್ಠಾಪಿಸಿ ಯಥಾಸ್ಥಿತಿ ಕಾಪಾಡುವಂತೆ ತಹಸೀಲದಾರರಿಗೆ ಆಗ್ರಹಿಸಿದ್ದಾರೆ.

# ಜಿಲ್ಲಾ ಯುವ ಕಾಂಗ್ರೆಸ್‌ನಿಂದ ಮತಕಳ್ಳತನದ ವಿರುದ್ಧ ಪೋಸ್ಟರ್ ಅಭಿಯಾನ

**ಕಲಬುರಗಿ, ಆ.18–** ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಶಕೀಲ್ ಸರಡಗಿ ನೇತೃತ್ವದಲ್ಲಿ ನಗರದ ಪ್ರಮುಖ ಸ್ಥಳಗಳಲ್ಲಿ ಸಾರ್ವಜನಿಕ ಜಾಗೃತಿ ಮೂಡಿಸುವ ಗುರಿಯನ್ನು ಹೊಂದಿರುವ ಮತ ಕಳ್ಳತನದ ವಿರುದ್ಧ ಪೋಸ್ಟರ್ ಅಭಿಯಾನವನ್ನು ಪ್ರಾರಂಭಿಸಿತು.

ಈ ಸಂದರ್ಭದಲ್ಲಿ ಮಾತನಾಡಿದ ಯುವ ಕಾಂಗ್ರೆಸ್ ನಾಯಕರು, ಕೇಂದ್ರ ಚುನಾವಣಾ ಆಯೋಗವನ್ನು ತೀವ್ರವಾಗಿ ಟೀಕಿಸಿದರು, ಅದು ಬಿಜೆಪಿಯ ಕೈಗೊಂಬೆಯಾಗಿ ಕಾರ್ಯ ನಿರ್ವಹಿಸುತ್ತಿದೆ ಎಂದು ಆರೋಪಿಸಿದರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಹಿರಿಯ ನಾಯಕ ರಾಹುಲ್ ಗಾಂಧಿ ಅವರು ಎತ್ತಿರುವ ಪ್ರಶ್ನೆಗಳಿಗೆ ಉತ್ತರಿಸುವ ಬದಲು, ಆಯೋಗವು ವಿರೋಧ ಪಕ್ಷಗಳ ಭಯವನ್ನು ತೋರಿಸುತ್ತಾ ಮೌನವನ್ನು ಆರಿಸಿಕೊಂಡಿದೆ ಎಂದು ಅವರು ಹೇಳಿದರು.

ನಮ್ಮ ಆಂದೋಲನ ಸ್ಪಷ್ಟವಾಗಿದೆ.ಒಬ್ಬ ವ್ಯಕ್ತಿ, ಒಂದು ಮತವನ್ನು ಅದರ ನಿಜವಾದ ಉತ್ಸಾಹದಲ್ಲಿ ಜಾರಿಗೆ ತರಲಾಗಿದೆ ಎಂದು ನಾವು ಖಚಿತಪಡಿಸಿಕೊಳ್ಳುತ್ತೇವೆ ಮತ್ತು ಪ್ರತಿಯೊಬ್ಬ ನಾಗರಿಕನು ಕುಶಲತೆ ಅಥವಾ ವಂಚನೆಯಿಲ್ಲದೆ ಮತ ಚಲಾಯಿಸಲು ತಮ್ಮ ಹಕ್ಕಿನ ಅವಕಾಶವನ್ನು ಪಡೆಯುತ್ತಾನೆ ಎಂದು ಶಕೀಲ್ ಸರಡಗಿ ಹೇಳಿದರು.ಈರಣ್ಣ ಪಾಟೀಲ ಝಳಕಿ.ಅಮರ ಶಿರವಾಳ,ಪರಶುರಾಮ ನಾಟೀಕಾರ,ಉಮರ್ ಜುನೈದಿ,ರಾಜು ಮಾಳಗಿ,ಇಜಾಜ್




ನಿಂಬಾಳಕರ್,ಗಣೇಶ ನಾಗನಹಳ್ಳಿ,ಸಂಘಪಾಲ್ ಕಾಂಬಳೆ,ಮಿಸ್ತ್ರೀ ಶರ್ಫುದ್ದೀನ್,ಅಸ್ಲಂ ಸಿಂದಗಿ,ಕಾರ್ತಿಕ ಹೊಸಮನಿ ಸೇರಿದಂತೆ ಹಲವರು ಪಾಲ್ಗೊಂಡರು.

## ಎಸ್‌ಆರ್‌ಎನ್ ಮೆಹತಾ ಶಾಲೆಯಲ್ಲಿ ಎಡಗೈ ಬಳಕೆದಾರರ ದಿನಾಚರಣೆ

**ಕಲಬುರಗಿ,ಆ.18–** ನಗರದ ಎಸ್.ಆರ್.ಎನ್ ಮೆಹತಾ ಸಿಬಿಎಸ್‌ಸಿ ಶಾಲೆಯಲ್ಲಿ ಎಡಗೈ ವಿದ್ಯಾರ್ಥಿಗಳ ದಿನವನ್ನು ಆಚರಿಸಲಾಯಿತು.

ಎಡಗೈ ವಿದ್ಯಾರ್ಥಿಗಳ ವಿಶಿಷ್ಟ ಪ್ರತಿಭೆ ಮತ್ತು ಸಾಮರ್ಥ್ಯಗಳನ್ನು ಗುರುತಿಸಿ ಎಡಗೈ ಬಳಕೆದಾರರ ದಿನ ಆಚರಣೆಯನ್ನು ಮಾಡಲಾಯಿತು. ಭಾರತದಲ್ಲಿ ಕೆಲವು ಶಾಲೆಗಳು ಮಾತ್ರ ಅಂತರಾಷ್ಟ್ರೀಯ ಎಡಗೈ ಬಳಕೆದಾರರ ದಿನವನ್ನು ಆಚರಿಸುತ್ತವೆ. ಕಲಬುರಗಿಯಲ್ಲಿ ಈ ಕಾರ್ಯಕ್ರಮವನ್ನು ಆಚರಿಸಿದ ಏಕೈಕ ಶಾಲೆ ಎಸ್. ಆರ್. ಎನ್ ಮೆಹತಾ ಆಗಿದೆ. ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಡಾ. ಅರುಂಧತಿ ಪಾಟೀಲ್ ಅವರು ಆಗಮಿಸಿ ಎಡಗೈ ಬಳಕೆದಾರರಾಗುವುದರ ಸವಾಲುಗಳು ಮತ್ತು ಪ್ರಯೋಜನಗಳ ಬಗ್ಗೆ ಪೋಷಕರಿಗೆ ಅರಿವು ಮೂಡಿಸಿದರು.

## ಸಿಇಸಿ ವಿರುದ್ಧ ಮಹಾಭಿಯೋಗ

# ಜ್ಞಾನೇಶ್ ವಿರುದ್ಧ ಸಂಸತ್ತಿನಲ್ಲಿ ಪ್ರಸ್ತಾವನೆ ಮಂಡಿಸಲು ಇಂಡಿಯಾ ಮೈತ್ರಿಕೂಟ ಸಭೆಯಲ್ಲಿ ನಿರ್ಧಾರ





**ನವದೆಹಲಿ, ಆ. 18–**ವಿಶೇಷ ತೀವ್ರ ಮತ ಪರಿಷ್ಕರಣೆ ಮತ್ತು ಮತಗಳ್ಳತನದ ಆರೋಪದ ವಿರುದ್ಧ ವಿರೋಧ ಪಕ್ಷಗಳು ಪ್ರತಿಭಟನೆಯನ್ನು ತೀವ್ರಗೊಳಿಸುತ್ತಿದ್ದಂತೆ, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ವಿರುದ್ಧ ಮಹಾಭಿಯೋಗ ಪ್ರಸ್ತಾವನೆಯನ್ನು ಸಂಸತ್ತಿನಲ್ಲಿ ಮಂಡಿಸಲು ಇಂಡಿಯಾ ಮೈತ್ರಿಕೂಟ ನಿರ್ಧರಿಸಿದೆ.

ನಿನ್ನೆ ಚುನಾವಣಾ ಆಯುಕ್ತರು ಮತಗಳ್ಳತನದ ಬಗ್ಗೆ ಪ್ರಮಾಣ ಪತ್ರ ನೀಡಿ ಇಲ್ಲವೆ ಕ್ಷಮೆ ಕೇಳುವಂತೆ ಸೂಚಿಸಿದ ಬೆನ್ನಲ್ಲೇ ಜ್ಞಾನೇಶ್ ವಿರುದ್ಧ ಹೋರಾಟವನ್ನು ಇಂಡಿಯಾ ಮೈತ್ರಿಕೂಟ ಮತ್ತಷ್ಟು ತೀವ್ರಗೊಳಿಸಿದೆ.

ಕಾಂಗ್ರೆಸ್ ಅಧ್ಯಕ್ಷ ಹಾಗೂ ರಾಜ್ಯ ಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ನೇತೃತ್ವದಲ್ಲಿ ನಡೆದ ಸದನ ನಾಯಕರ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ.ಮುಖ್ಯ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ಮಹಾಭಿಯೋಗ ನೋಟಿಸ್ ಸಲ್ಲಿಸುವ ಯೋಜನೆ ಹೊಂದಿದ್ದು, ಶೀಘ್ರದಲ್ಲೇ ಮಹಾಭಿಯೋಗದ ವಿಧಾನಗಳನ್ನು ರೂಪಿಸಲಾಗುವುದು ಎಂದು ಹಿರಿಯ ನಾಯಕರೊಬ್ಬರು ತಿಳಿಸಿದ್ದಾರೆ.

ಮತಗಳ್ಳತನ ಆರೋಪದ ಬಗ್ಗೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ಮಾಡಿದ್ದ ಆರೋಪ ಸಂಬಂಧ 7 ದಿನಗಳ ಒಳಗಾಗಿ ಪ್ರಮಾಣ ಪತ್ರ ಸಲ್ಲಿಸಬೇಕು ಇಲ್ಲದಿದ್ದರೆ ದೇಶದ ಕ್ಷಮೆ ಯಾಚಿಸಬೇಕು ಎಂದು ಹೇಳಿದ್ದರು.

ಇದರಿಂದ ಕೆರಳಿದ ಕಾಂಗ್ರೆಸ್ ಮತ್ತು ಇಂಡಿಯಾ ಮೈತ್ರಿಕೂಟದ ನಾಯಕರು ಮುಖ್ಯ ಚುನಾವಣಾ ಆಯುಕ್ತರ ವಿರುದ್ಧ ಮಹಾಭಿಯೋಗ ಮಂಡಿಸಲು ಸಜ್ಜಾಗಿದ್ದಾರೆ.ಬಿಹಾರದಲ್ಲಿ ಮತದಾರರ ಪಟ್ಟಿ ತೀವ್ರ ಪರಿಷ್ಕರಣೆ ಹಾಗೂ ಬೆಂಗಳೂರಿನಲ್ಲಿ ಮತಗಳ್ಳತನ ವಿರುದ್ಧ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಆರೋಪ ಮಾಡಿದ್ದರು. ಇದರಿಂದ ಚುನಾವಣಾ ಆಯೋಗ ಮತ್ತು ಇಂಡಿಯಾ ಮೈತ್ರಿಕೂಟದ ವಿರುದ್ಧ ಆರೋಪ ಪ್ರತ್ಯಾರೋಪಕ್ಕೆ ಕಾರಣವಾಗಿದೆ.

ಇಂಡಿಯಾ ಮೈತ್ರಿಕೂಟದ ನಾಯಕರು ಮತಗಳ್ಳತನದ ವಿರುದ್ಧ ಕೇಂದ್ರ ಸರ್ಕಾರ ಮತ್ತು ಚುನಾವಣಾ ಆಯೋಗ ವಿರುದ್ಧ ಕಳೆದ ಹಲವು ದಿನಗಳಿಂದ ಸಂಸತ್ತಿನ ಹೊರಗೆ ಮತ್ತು ಒಳಗೆ ಹೋರಾಟ ಮಾಡುತ್ತಿದ್ದಾರೆ.

ರಾಹುಲ್ ಗಾಂಧಿ ಮಾಡಿದ್ದ ಆರೋಪದ ಹಿನ್ನೆಲೆಯಲ್ಲಿ ಮುಖ್ಯ ಚುನಾವಣಾ ಆಯುಕ್ತರು 7 ದಿನಗಳ ಗಡುವು ನೀಡಿರುವುದು ಕಾಂಗ್ರೆಸ್ ಮತ್ತು ಇಂಡಿಯಾ ನಾಯಕರನ್ನು ಕೆರಳಿಸಿದ್ದು ಮಹಾಭಿಯೋಗದ ಮೂಲಕ ಅಧಿಕಾರದಿಂದ ಮುಖ್ಯ ಚುನಾವಣಾ ಆಯುಕ್ತರನ್ನು ಕೆಳಗಿಳಿಸಲು ಸಿದ್ಧತೆ ನಡೆಸಿದ್ದಾರೆ.

**ಮತಗಳ್ಳತನ ಹೊಸ ಅಸ್ತ್ರ:** ಮತಗಳ್ಳತನದ ವಿರುದ್ಧ ಸಮರ ಸಾರಿರುವ ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) ಮತಗಳ್ಳತನ ಹೊಸ ಅಸ್ತ್ರ ಎಂದು ಆರೋಪಿಸಿದ್ದಾರೆ.

ಈ ಬಗ್ಗೆ ತಮ್ಮ ವಾಟ್ಸಾಪ್ ಚಾನೆಲ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ಅವರು ಬಿಹಾರದಲ್ಲಿ ಎಸ್ಐಆರ್ ನಂತರ ಮತದಾರರ ಪಟ್ಟಿಯಿಂದ ಕೈ ಬಿಟ್ಟಿರುವ ಫೋಟೋವನ್ನು ಜೊತೆಗೆ ಹಂಚಿಕೊಂಡಿದ್ದಾರೆ. ಎಸ್ಐಆರ್ ಮತಗಳ್ಳತನದ ಹೊಸ ಅಸ್ತ್ರ ಕಾಕತಾಳೀಯವೆಂಬಂತೆ ಈ ಚಿತ್ರದಲ್ಲಿ ನನ್ನೊಂದಿಗೆ ನಿಂತಿರುವ ಈ ಜನರು ಮತಗಳ್ಳತನ ಜೀವಂತ ಪುರಾವೆಯಾಗಿದ್ದಾರೆ ಎಂದು ಪೋಸ್ಟ್‌ನಲ್ಲಿ ಹೇಳಿಕೊಂಡಿದ್ದಾರೆ.

ಇವರೆಲ್ಲರೂ 2024ರ ಲೋಕಸಭಾ ಚುನಾವಣೆಯಲ್ಲಿ ಮತ ಚಲಾಯಿಸಿದ್ದರು. ಆದರೆ ಬಿಹಾರ ವಿಧಾನಸಭಾ ಚುನಾವಣೆಗಳು ಬರುವ ವೇಳೆಗೆ ಅವರ ಗುರುತು, ಅಸ್ತಿತ್ವ ದೇಶದ ಪ್ರಜಾಪ್ರಭುತ್ವದಿಂದ ಅಳಿಸಿ ಹೋಗಿದೆ ಎಂದು ಆರೋಪಿಸಿದ್ದಾರೆ. ಬಹುಜನರು ಎಂಬ ಕಾರಣಕ್ಕೆ ಬಿಜೆಪಿ ಮತ್ತು ಚುನಾವಣಾ ಆಯೋಗ ಸೇರಿಕೊಂಡು ಅವರನ್ನು ಜೀವನದುದ್ದಕ್ಕೂ ಬಡವರಾಗಿ ಇರುವಂತೆ ಶಿಕ್ಷೆ ವಿಧಿಸುತ್ತಿದೆ. ನಮ್ಮ ಸೈನಿಕರನ್ನು ಸಹ ಬಿಡಲಿಲ್ಲ ಎಂದು ಪೋಸ್ಟ್‌ನಲ್ಲಿ ಕಿಡಿಕಾರಿರುವ ಅವರಿಗೆ ಮತದಾನ ಮಾಡುವ ಹಕ್ಕಾಗಲಿ, ಗುರುತಾಗಲಿ ಇಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

# ವಿಶ್ವ ಛಾಯಾಗ್ರಾಹಣ ದಿನ

ಒಂದು ಚಿತ್ರ ಸಾವಿರ ಪದಗಳಿಗೆ ಸಮ. ಇಂದು, ಪ್ರತಿಯೊಬ್ಬರೂ ಛಾಯಾಗ್ರಾಹಕರೇ. ಮೊಬೈಲ್ ಫೋನ್‌ಗಳು ಜಾಗತಿಕ ಸಮುದಾಯದ ಅವಿಭಾಜ್ಯ ಅಂಗವಾಗಿರುವುದರಿಂದ, ಕ್ಯಾಮೆರಾಗಳು ಎಲ್ಲರ ಬೆರಳ ತುದಿಯಲ್ಲಿವೆ.

ಛಾಯಾಗ್ರಹಣ ಒಂದು ಕಲೆ. ಕಥೆ ಹೇಳುವಾಗ, ಚಿತ್ರಗಳು ಬಹಳ ಮುಖ್ಯವಾದ ಮಾಧ್ಯಮವಾಗಿದ್ದು, ಪದಗಳಿಗಿಂತ ವೇಗವಾಗಿ ಮತ್ತು ತಕ್ಷಣವೇ ಭಾವನೆಗಳನ್ನು ವ್ಯಕ್ತಪಡಿಸಬಹುದು. ಬಹುತೇಕ ಎಲ್ಲವನ್ನೂ ಕ್ಯಾಮೆರಾದಲ್ಲಿ ಸೆರೆಹಿಡಿಯಬಹುದು, ಅದು ಒಂದು ಸ್ಥಳದ ಚಿತ್ರ, ಅನುಭವ, ಭಾವನೆ, ಒಂದು ಕ್ಷಣವಾಗಿರಬಹುದು. ಛಾಯಾಗ್ರಹಣ ತಂತ್ರಜ್ಞಾನವು ಮಾನವೀಯತೆಗೆ ಹೊಸ ದೃಷ್ಟಿಕೋನವನ್ನು ಒದಗಿಸಿದೆ ಮಾತ್ರವಲ್ಲದೆ, ಮಾಹಿತಿ, ಕಲೆ ಮತ್ತು ಸಂವಹನ ಕ್ಷೇತ್ರಗಳಲ್ಲಿ ಆಮೂಲಾಗ್ರ ಕ್ರಾಂತಿಯನ್ನು ತಂದಿದೆ. ಸ್ಟಿಲ್ ಛಾಯಾಗ್ರಹಣದಿಂದ ವೀಡಿಯೊ ಛಾಯಾಗ್ರಹಣದವರೆಗೆ, ಈ ಕಲೆ ಬಹಳಷ್ಟು ಅಭಿವೃದ್ಧಿಗೊಂಡಿದೆ. ಛಾಯಾಗ್ರಹಣದ ಹಿಂದಿನ ಕಲೆ, ಕರಕುಶಲ, ವಿಜ್ಞಾನ ಮತ್ತು ಇತಿಹಾಸದ ಮಹತ್ವವನ್ನು ಪರಿಗಣಿಸಿ, ಪ್ರತಿ ವರ್ಷ ಆಗಸ್ಟ್ 19 ರಂದು (ವಿಶ್ವ ಛಾಯಾಗ್ರಹಣ ದಿನ 2024) ವಿಶ್ವ ಛಾಯಾಗ್ರಹಣ ದಿನವನ್ನು ಆಚರಿಸಲಾಗುತ್ತದೆ. ಈ ದಿನ ಛಾಯಾಗ್ರಾಹಕರು ಮತ್ತು ಛಾಯಾಗ್ರಹಣ ಉತ್ಸಾಹಿಗಳಿಗೆ ತಮ್ಮ ಕಲೆ ಮತ್ತು ಅವರ ಭಾವನೆಗಳನ್ನು ಹಂಚಿಕೊಳ್ಳಲು ಉತ್ತಮ ಅವಕಾಶವನ್ನು ನೀಡುತ್ತದೆ.

ಒಂದೇ ಒಂದು ಫೋಟೋದಿಂದ ಹಲವು ಸಿಹಿ ನೆನಪುಗಳು ಮೂಡುತ್ತವೆ. ಸಮಯ ಕಳೆದರೂ ಫೋಟೋ ನೋಡಿದಾಗ, ಹಿಂತಿರುಗಿ ಹಿಂದಿನ ವರ್ಷಗಳ ಸಿಹಿ ನೆನಪುಗಳನ್ನು ನೆನಪಿಸಿಕೊಳ್ಳುತ್ತೀರಿ. ಸಂತೋಷ.. ದುಃಖಗಳು.. ಸಿಹಿ ಕ್ಷಣಗಳು.. ಸಾಧನೆಗಳು.. ಅದ್ಭುತ ದೃಶ್ಯಗಳು.. ಕಾಲಾನಂತರದಲ್ಲಿ ಪ್ರಕೃತಿಯಲ್ಲಿ



ಆಗುವ ಬದಲಾವಣೆಗಳನ್ನು ಸೆರೆಹಿಡಿಯುವ ಮತ್ತು ಅವುಗಳನ್ನು ಸುರಕ್ಷಿತವಾಗಿಡುವ ಮತ್ತು ಅವುಗಳನ್ನು ಮತ್ತೆ ಮತ್ತೆ ವೀಕ್ಷಿಸುವ ಅವಕಾಶ ಫೋಟೋದಿಂದ ಮಾತ್ರ ಸಾಧ್ಯ.

ಛಾಯಾಗ್ರಹಣ ಇಷ್ಟೊಂದು ಜನಪ್ರಿಯವಾಗುವ ಮೊದಲೇ ಅದು ಅಸ್ತಿತ್ವಕ್ಕೆ ಬಂದ ಕೆಲವು ಐತಿಹಾಸಿಕ ಕ್ಷಣಗಳಿವೆ. ಲೂಯಿಸ್ ಟೆಗುರೆ ಎಂಬ ಫ್ರೆಂಚ್ ವ್ಯಕ್ತಿಯನ್ನು ಛಾಯಾಗ್ರಹಣದ ಪಿತಾಮಹ ಎಂದು ಪರಿಗಣಿಸಲಾಗುತ್ತದೆ. ಆದರೆ ಅದಕ್ಕೂ ಹಲವು ವರ್ಷಗಳ ಮೊದಲು, ಗ್ರೀಕ್ ತತ್ವಜ್ಞಾನಿ ಅರಿಸ್ಟಾಟಲ್ ಈ ತಂತ್ರವನ್ನು ವಿವರಿಸಿದ್ದಾರೆ. ವಿಶ್ವದ ಮೊದಲ ಪಿನ್‌ಹೋಲ್ ಕ್ಯಾಮೆರಾ, ಕ್ಯಾಮೆರಾ ಅಬ್ಸ್ಕ್ಯೂರಾ ಜನನದ ಹಿಂದೆಯೂ ಅರಿಸ್ಟಾಟಲ್‌ನ ತತ್ವವನ್ನು ಬಳಸಲಾಯಿತು. ಬೆಳಕಿನ ಕಿರಣಗಳು ಸಣ್ಣ ರಂಧ್ರದ ಮೂಲಕ ಕತ್ತಲೆಯ ಕೋಣೆಗೆ ಹಾದು ಹೋದರೆ ಕೋಣೆಯ ಮೇಲ್ಮೈಯಲ್ಲಿ ತಲೆಕೆಳಗಾದ ಚಿತ್ರಗಳನ್ನು ಸೃಷ್ಟಿಸುತ್ತವೆ ಎಂಬ ತತ್ವವನ್ನು ಅರಿಸ್ಟಾಟಲ್ ಜಗತ್ತಿಗೆ ಘೋಷಿಸಿದ್ದಾರೆ.

# ಧರ್ಮಸ್ಥಳದ ವಿರುದ್ಧ ಷಡ್ಯಂತ್ರ ಕ್ರಮಕ್ಕೆ ಬಿಜೆಪಿ ಆಗ್ರಹ

**ಬೆಂಗಳೂರು, ಆ.18–**ಶ್ರೀ ಕ್ಷೇತ್ರ ಧರ್ಮಸ್ಥಳದ ವಿಚಾರದಲ್ಲಿ ಮಧ್ಯಂತರ ವರದಿಯನ್ನೂ ಒಳಗೊಂಡಂತೆ ಗೊಂದಲಕ್ಕೆ ಗೃಹ ಸಚಿವರು ತೆರೆ ಎಳೆಯುವ ವಿಶ್ವಾಸದಲ್ಲಿ ನಾವು ಇದ್ದೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರು ತಿಳಿಸಿದ್ದಾರೆ.



ಧರ್ಮಸ್ಥಳದ ವಿರುದ್ಧ ಷಡ್ಯಂತ್ರ ನಡೆಯುತ್ತಿದ್ದು ಈ ಕ್ಷೇತ್ರದಬಗ್ಗೆ ಅಪಪ್ರಚಾರ ಮಾಡುತ್ತಿರುವ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಮಾಧ್ಯಮ ಪ್ರತಿನಿಧಿಗಳ ಜೊತೆ ಇಂದು ಮಾತನಾಡಿದ ಅವರು, ಬಿಜೆಪಿಯವರು ರಾಜಕಾರಣ ಮಾಡುತ್ತಿದ್ದಾರೆ ಎಂದು ಡಿ.ಸಿ.ಎಂ ಡಿ.ಕೆ.ಶಿವಕುಮಾರ್ ಅವರು ಆರೋಪ ಮಾಡಿದ್ದಾರೆ. ಧರ್ಮಸ್ಥಳದ ವಿಚಾರದಲ್ಲಿ ಬಹಳ ದೊಡ್ಡ ಷಡ್ಯಂತ್ರ ಇದೆ ಎಂದು ಡಿ.ಕೆ.ಶಿವಕುಮಾರ್ ಅವರೇ ಹೇಳಿಕೆ ಕೊಟ್ಟಿದ್ದಾರೆ. ಸಂದರ್ಭ ಬಂದಾಗ ಉತ್ತರ ನೀಡುತ್ತೇನೆ ಎಂದಿದ್ದಾರೆ. ಇನ್ನೂ ಯಾವಾಗ ಸಮಯ ಬರಲಿದೆ? ರಾಜ್ಯದ ಜನರು– ಕೋಟಿ, ಕೋಟಿ ಭಕ್ತಾದಿಗಳು ಇವತ್ತು ಆತಂಕದಲ್ಲಿದ್ದಾರೆ. ಧರ್ಮಸ್ಥಳದಲ್ಲಿ ಯಾವ ರೀತಿ ತನಿಖೆ ನಡೆಯುತ್ತಿದೆ. ಯಾವ ದಿಕ್ಕಿನಲ್ಲಿ ತೆಗೆದುಕೊಂಡು ಹೋಗುತ್ತಿದ್ದಾರೆ. ಇದೆಲ್ಲ ವಿಷಯದಲ್ಲಿ ಜನರು ನಿದ್ದೆ ಮಾಡದಂಥ ಸ್ಥಿತಿ ಇದೆ ಎಂದು ವಿವರಿಸಿದರು. ಇನ್ನೂ ಕೂಡ ಡಿ.ಕೆ.ಶಿವಕುಮಾರ್ ಅವರಿಗೆ ಸಮಯ ಬಂದಿಲ್ಲ ಎಂದು ಕಾಣುತ್ತದೆ ಎಂದು ಹೇಳಿದರು.

ನಿನ್ನೆ ದಿನ ನಮ್ಮ ಪಕ್ಷದ ಸಂಸದರು, ಎಲ್ಲ ಹಿರಿಯ ಶಾಸಕರು, ವಿಧಾನಪರಿಷತ್ ಸದಸ್ಯರ ಜೊತೆಗೂಡಿ ಶ್ರೀ ಕ್ಷೇತ್ರ ಧರ್ಮಸ್ಥಳಕ್ಕೆ ಭೇಟಿ ಕೊಟ್ಟು ಶ್ರೀ ಮಂಜುನಾಥೇಶ್ವರನ ದರ್ಶನ ಪಡೆದುಕೊಂಡಿದ್ದೇವೆ. ನಂತರ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆ ಅವರನ್ನೂ ಭೇಟಿ ಮಾಡಿದ್ದೇವೆ ಎಂದು ವಿವರಿಸಿದರು.

ಶ್ರೀ ಕ್ಷೇತ್ರ ಧರ್ಮಸ್ಥಳದ ವಿಚಾರದಲ್ಲಿ ಅಪಪ್ರಚಾರ ನಡೆಯುತ್ತಿದ್ದು, ಆ ಅಪಪ್ರಚಾರಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ರಾಜ್ಯ ಸರಕಾರವು ಯಾಕೆ ಎಚ್ಚತ್ತುಕೊಂಡಿಲ್ಲ? ರಾಜ್ಯ ಸರಕಾರಕ್ಕೆ ಅಪಪ್ರಚಾರಕ್ಕೆ ಕಡಿವಾಣ ಹಾಕುವ ಇಚ್ಛೆ ಇರಲಿಲ್ಲವೇ? ಯಾವ ಕಾರಣಕ್ಕೆ ಇದು ಆಗಿಲ್ಲ ಎಂಬ ಕುರಿತು ಗೃಹ ಸಚಿವರು ಇವತ್ತು ತಮ್ಮ ಉತ್ತರದಲ್ಲಿ ತಿಳಿಸಬೇಕು ಎಂದು ಒತ್ತಾಯಿಸಿದರು. ಪ್ರಶ್ನೆಗೆ ಉತ್ತರಿಸಿದ ಅವರು, ಸದನದಲ್ಲಿ ಏನು ಉತ್ತರ ನೀಡುತ್ತಾರೆಂದು ನೋಡಲಿದ್ದೇವೆ ಎಂದು ನುಡಿದರು.

ರಾಜ್ಯ ಸರಕಾರವು ತುಮಕೂರಿನಲ್ಲಿ ನಮ್ಮ ಕಾರ್ಯಕರ್ತರ ಮೇಲೆ ಪದೇಪದೇ ಎಫ್ಐಆರ್ ದಾಖಲಿಸುತ್ತದೆ. ಮೈಸೂರಿನಲ್ಲೂ ಪೋಸ್ಟ್ ವಿರುದ್ಧ ಕಾರ್ಯಕರ್ತನ ಮೇಲೆ ಎಫ್ಐಆರ್ ದಾಖಲಿಸಿ ಬಂಧಿಸಿದೆ. ರಾಜ್ಯ ಸರಕಾರವು ಹಿಂದೂ ಕಾರ್ಯಕರ್ತರ ಬಗ್ಗೆ ತೋರುವ ಆಸಕ್ತಿಯನ್ನು ಧರ್ಮಸ್ಥಳದ ವಿಷಯದಲ್ಲಿ ಅಪಪ್ರಚಾರದ ಮಾಡುವವರ ವಿರುದ್ಧ ಕ್ರಮ ಕೈಗೊಳ್ಳಲು ತೋರಿಲ್ಲ ಎಂದು ಟೀಕಿಸಿದರು.

ಹಣಕಾಸಿನ ಪರಿಸ್ಥಿತಿ– ದುಸ್ಥಿತಿ

ನುಡಿದಂತೆ ನಡೆಯುವ ರಾಜ್ಯ ಸರಕಾರದಡಿ ರಾಜ್ಯದ ಹಣಕಾಸಿನ ಪರಿಸ್ಥಿತಿ ಎಲ್ಲಿಗೆ ಬಂದಿದೆ ಎಂದರೆ ಸ್ವಾತಂತ್ರ್ಯ ಹೋರಾಟಗಾರರ ಮಾಸಾಶನ ಕೊಡುವ ಯೋಗ್ಯತೆಯೂ ಈ ಸರಕಾರಕ್ಕೆ ಇಲ್ಲ ಎಂದು ವಿಜಯೇಂದ್ರ ಅವರು ಟೀಕಿಸಿದರು. ಸ್ವಾತಂತ್ರ್ಯ ಹೋರಾಟಗಾರರ ಮಾಸಾಶನ 4.85 ಕೋಟಿ ಮೊತ್ತವನ್ನು ಕೊಡದೇ ತಡೆ ಹಿಡಿದಿದ್ದಾರೆ. ಇದನ್ನು ಪ್ರಶ್ನಿಸಿದರೆ, ರಾಜ್ಯದ ಆರ್ಥಿಕ ಪರಿಸ್ಥಿತಿ ಬಹಳ ಚೆನ್ನಾಗಿದೆ ಎಂದು ಸಿದ್ದರಾಮಯ್ಯನವರು ಹೇಳುತ್ತಾರೆ. ಮುಖ್ಯಮಂತ್ರಿ ಪರಿಹಾರ ನಿಧಿಗೆ ಹಣವನ್ನು ಬಿಡುಗಡೆ ಮಾಡದಂಥ ದುಸ್ಥಿತಿಗೆ ಬಂದು ನಿಂತಿದೆ ಎಂದು ಆಕ್ಷೇಪಿಸಿದರು.

ತುಂಗಭದ್ರಾ ಅಣೆಕಟ್ಟಿನ ವಿಚಾರದಲ್ಲಿ ಅಲ್ಲಿನ ಉಸ್ತುವಾರಿ ಸಚಿವ ಶಿವರಾಜ್ ತಂಗಡಗಿ ಅವರ ಹೇಳಿಕೆಯನ್ನೂ ಗಮನಿಸಿದ್ದೇನೆ. ಕಳೆದ ಆಗಸ್ಟ್‌ನಲ್ಲಿ 19ನೇ ಕ್ರಸ್ಟ್ ಗೇಟ್ ಮುರಿದುಬಿದ್ದಿತ್ತು. ರೈತರೂ ಆತಂಕದಲ್ಲಿ ಇದ್ದರು. ಸಾವಿರಾರು ಕ್ಯುಸೆಕ್ ನೀರು ಹರಿದು ವ್ಯರ್ಥವಾಗಿದೆ. ಅದಕ್ಕೆ ಖಾಯಂ ಪರಿಹಾರ ನೀಡಿಲ್ಲ. ಇವರು ತಡ ಮಾಡಿದ್ದು, ಒತ್ತಡ ಇತರ ಗೇಟ್‌ಗಳ ಮೇಲೆ ಬಿದ್ದಿದೆ. ಇದರ ಪರಿಣಾಮವಾಗಿ ಎಲ್ಲ 33 ಕ್ರಸ್ಟ್ ಗೇಟನ್ನೂ ತಕ್ಷಣ ಬದಲಿಸಬೇಕಾದ ಪರಿಸ್ಥಿತಿ ಒದಗಿಬಂದಿದೆ ಎಂದು ಗಮನ ಸೆಳೆದರು.

ಮತ್ತೊಂದು ಕಡೆ ಕೊಪ್ಪಳ, ರಾಯಚೂರು, ಬಳ್ಳಾರಿ ಮೊದಲಾದ ಜಿಲ್ಲೆಗಳ ರೈತರು ಪ್ರತಿವರ್ಷ 2 ಬೆಳೆ ಬೆಳೆಯುತ್ತಿದ್ದರು. ಆದರೆ, ಸಚಿವರ ಮತ್ತು ರಾಜ್ಯ ಸರಕಾರದ ಬೇಜವಾಬ್ದಾರಿತನದಿಂದ ರಾಜ್ಯ ಸರಕಾರ ಅಥವಾ ಸಂಬಂಧಿತ ಸಚಿವರು, ಟಿ.ಬಿ. ನೀರಾವರಿ ಮಂಡಳಿಯಲ್ಲಿ ಚರ್ಚೆ ಮಾಡಿ ಒತ್ತಡ ಹಾಕದ ಪರಿಣಾಮವಾಗಿ ಈ ಬಾರಿ ರೈತರು ಒಂದೇ ಬೆಳೆಗೆ ತೃಪ್ತಿ ಪಡುವ ಸಂದರ್ಭ ಬಂದಿದೆ ಎಂದು ಟೀಕಿಸಿದರು.

ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಮಾತನಾಡಿ ಧರ್ಮಸ್ಥಳದ ಬಗ್ಗೆ ಅಪಪ್ರಚಾರ ಮಾಡಿದ ಮುಖ್ಯಮಂತ್ರಿ ವಿರುದ್ಧವು ಆರೋಪ ಮಾಡಿದ್ದಾರೆ. ಈ 24 ಕೊಲೆಗಳ ಆರೋಪಕ್ಕೂ ಎಸ್ಐಟಿ ರಚಿಸಿ ತನಿಖೆ ಮಾಡಿಸಲಿ ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯ ರವಿಕುಮಾರ್ ಮಾತನಾಡಿ ಧರ್ಮಸ್ಥಳ ಪ್ರಕರಣ ಕುರಿತಂತೆ ಅನಾಮಿಕ ವ್ಯಕ್ತಿ ಮುಸುಕುಧಾರಿಯನ್ನು ಬಂಧಿಸಿ ಆತನನ್ನು ಮಂಪರು ಪರೀಕ್ಷೆಗೆ ಒಳಪಡಿಸಬೇಕು. ಈ ವಿಚಾರದಲ್ಲಿ ಬಿಜೆಪಿ ಜನಾಂದೋಲನ ಹೋರಾಟ ಮಾಡುತ್ತಿದೆ ಎಂದು ಹೇಳಿದರು.

# ಹಸಿವು ಬಡತನದ ಬದುಕು ಸವಾಲಾಗಿ ಸ್ವೀಕರಿಸಿ:ವಿಜಯಲಕ್ಷ್ಮಿ ದೇಶಮಾನೆ



**ಕಲಬುರಗಿ,ಆ.18–**ಹಸಿವು ಬಡತನದ ಬದುಕು ಸವಾಲಾಗಿ ಸ್ವೀಕರಿಸಿದವರು ಸಾಧನೆಯ ಶಿಖರ ವವೇರುತ್ತಾರೆ ಎಂದು ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ ಡಾ. ವಿಜಯಲಕ್ಷ್ಮಿ ದೇಶಮಾನೆ ಹೇಳಿದರು. ಕಲಬುರಗಿ ನಗರದ ಗಂಜ ಪ್ರದೇಶದಲ್ಲಿರುವ ತೊಗರಿ ಬೆಳೆಗಾರರ ಸಂಘದ ಸಭಾಂಗಣದಲ್ಲಿ ಜನ್ಮದಾತ ವಿ ಎಸ್ ಅಟ್ಟೂರ ಸ್ಮಾರಕ ಚಾರಿಟೇಬಲ ಟ್ರಸ್ಟ್ ಉದ್ಘಾಟನಾ ಹಾಗೂ ಜನ್ಮದಾತ ರಾಜ್ಯಮಟ್ಟದ ಪ್ರಶಸ್ತಿ ಪ್ರಧಾನ ಪ್ರಶಸ್ತಿ ಸ್ವೀಕರಿಸಿ ಮಾತನಾಡುತ್ತಾ ನಾವು ಎಷ್ಟೇ ಉನ್ನತ ಮಟ್ಟಕ್ಕೆ ಹೋದರು ಹೆತ್ತವರನ್ನು ಹಾಗೂ ಹುಟ್ಟಿದ ಊರನ್ನು ಎಂದು ಮರೆಯಬಾರದು. ಅಟ್ಟೂರ ಟ್ರಸ್ಟ ನವರು ನೀಡಿದ ಈ ಪ್ರಶಸ್ತಿ ನನ್ನ ಹೆತ್ತತವರಿಗೆ ಬರಮಾಡಿಕೊಂಡಿದ್ದು ಬಹಳ ಖುಷಿ ಅನಿಸಿದೆ. ತವರಿನ ಸನ್ಮಾನ ಯಾವುದೇ ಪ್ರಶಸ್ತಿಗೂ ಮಿಗಿಲಿಲ್ಲ. ಜನ್ಮದಾತ ಪ್ರಶಸ್ತಿ ನನ್ನ ಸೇವೆಗೆ ಸ್ಫೂರ್ತಿ ನೀಡಿದೆ ಎಂದು ಮಾರ್ಮಿಕವಾಗಿ ನುಡಿದರು. ಸಮಾರಂಭ ಉದ್ಘಾಟಿಸಿದ ಕಲಬುರಗಿ ಜಿಲ್ಲಾ ಮತ್ತು ಸತ್ರ 2ನೇ ಹೆಚ್ಚುವರಿ ನ್ಯಾಯಾಧೀಶರಾದ ಗೌ. ಶ್ರೀ ಮೋಹನ ಬಾಡಗಂಡಿ ಮಾತನಾಡುತ್ತ ಇಂದಿನ ಕಾಲದಲ್ಲಿ ಕೆಲವು ಜನರು ಸಂಪತ್ತು ಬಂದಾಗ ಸಂಬಂಧವನ್ನೇ ಮರೆಯುತ್ತಾರೆ. ಇಂಥವರ ಮಧ್ಯದಲ್ಲಿ ಆರೋಗ್ಯವಂತ ಸಮಾಜ ನಿರ್ಮಾಣ ಮಾಡಲು ತಮ್ಮ ಜೀವನವನ್ನೇ ಸಮರ್ಪಣೆ ಮಾಡಿದ ಇಂದಿನ ಜನ್ಮದಾತ ಪ್ರಶಸ್ತಿ ಪುರಸ್ಕೃತರು. ಐದು ಜನ ಮಹನೀಯರು ಸರಳತೆಯ ಜೀವನದೊಂದಿಗೆ ಸರ್ವರಿಗೂ ಆದರ್ಶವಾಗಿದ್ದಾರೆ ಎಂದು ಹೇಳಿದರು. ಶ್ರೀನಿವಾಸ ಸರಡಗಿ ಪೂಜ್ಯರ ಡಾ. ರೇವಣಸಿದ್ದ ಶಿವಾಚಾರ್ಯರು ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಶ್ರೀ ಸಿದ್ದಲಿಂಗೇಶ್ವರ ಪ್ರಕಾಶನ ಮಾಲೀಕರಾದ ಡಾ. ಬಸವರಾಜ ಕೊನೇಕ ಅಧ್ಯಕ್ಷತೆ ವಹಿಸಿದರು. ಹಿರಿಯ ಸಾಹಿತಿಗಳಾದ ಡಾ. ಸ್ವಾಮಿರಾವ ಕುಲಕರ್ಣಿ ಪ್ರಶಸ್ತಿ ಪ್ರದಾನ ಮಾಡಿದರು. ಮುಖ್ಯ ಅತಿಥಿಗಳಾಗಿ ಗುಲಬರ್ಗಾ ನ್ಯಾಯವಾದಿಗಳ ಸಂಘದ ಅಧ್ಯಕ್ಷರಾದ ಶಿವಕುಮಾರ ಪಸಾರ, ಹಿರಿಯ ನ್ಯಾಯ ವಾದಿಗಳಾದ ಶಿವಪುತ್ರಪ್ಪ ಬರುಡೆ, ಸಮಾಜ ಸೇವಕರಾದ ಸಂಜೀವಕುಮಾರ ಶೆಟ್ಟಿ ಆಗಮಿಸಿದರು. ಇದೆ ಸಂಧರ್ಭದಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಾಧಿ ಶರಾದ ನ್ಯಾಯಮೂರ್ತಿ ಅರಳಿ ನಾಗರಾಜ, ಜನಪರ ಹೋರಾಟಗಾರರಾದ ಎಸ್ ಕೆ ಕಾಂತಾ, ಹಿರಿಯ ರಂಗಭೂಮಿ ಕಲಾವಿದರಾದ ಪರಮೇಶ್ವರ ಲೆಂಡೆ, ಸಮಾಜ ಸೇವಕರಾದ ಬಸವರಾಜ ಶಿವಗೋಳ ಅವರಿಗೆ "ಜನ್ಮದಾತ" ಪ್ರಶಸ್ತಿ ನೀಡಿ ಗೌರವಿಸಲಾಯಿತು. ಶಿವಶರಣಪ್ಪ ಅಟ್ಟೂರ, ನಾಗಿಂದ್ರಪ್ಪ ಅಟ್ಟೂರ, ಉಪಸ್ಥಿತರಿದ್ದರು. ಟ್ರಸ್ಟ್ ನ ಅಧ್ಯಕ್ಷರಾದ ನ್ಯಾಯವಾದಿ ಹಣಮಂತರಾಯ ಅಟ್ಟೂರ ಸ್ವಾಗತಿಸಿ ಸಮಾರಂಭದ ಕುರಿತು ಮಾತನಾಡಿದರು.ಸಂಗಮೇಶಶಾಸ್ತ್ರಿ ಮಾಷಾಳ ಪ್ರಾರ್ಥಿಸಿದರು.ಶಿವಕಾಂತ ಚಿಮ್ಮಾ, ವಿರೇಶ ಬೋಳಶೆಟ್ಟಿ, ಸಂಗಮೇಶ್ವರ ಸರಡಗಿ ನಿರೂಪಿಸಿದರು.ಹಾಸ್ಯ ಕಲಾವಿದ ಗುಂಡಣ್ಣ ಡಿಗ್ಗಿ ವಂದಿಸಿದರು.ಸಂಗೀತ ಕಲಾವಿದರಾದ ಶ್ರವಣಕುಮಾರ ಮಠ, ಮಲಕಾರಿ ಪೂಜಾರಿ ಸೇರಿದಂತೆ ಅನೇಕ ಜನ ಸಂಗೀತ ಸೇವೆ ಸಲ್ಲಿಸಿದರು.ಅಟ್ಟೂರ ಕುಟುಂಬದ ಸದಸ್ಯರು ಸೇರಿದಂತೆ ಅನೇಕ ಜನ ಭಾಗವಹಿಸಿದರು.

# ಮಾರಕಾಸ್ತ್ರಗಳಿಂದ ಇರಿದು ವ್ಯಕ್ತಿಯ ಕೊಲೆ

**ಕಲಬುರಗಿ,ಆ.18–** ನಗರದ ಹಳೆಯ ಜೇವರಗಿರಸ್ತೆ ರೈಲ್ವೆ ಕೆಳಸೇತುವೆ ಹತ್ತಿರ ಅಪಾರ್ಟಮೆಟ್‌ನಲ್ಲಿ ಕೆಲಸ ಮಾಡುತ್ತಿದ್ದ ವ್ಯಕ್ತಿಯೊಬ್ಬನನ್ನು ಅಪರಿಚಿತರು ಮಾರಕಾಸ್ತ್ರಗಳಿಂದ ಇರಿದು ಕೊಲೆ ಮಾಡಿದ ಘಟನೆ ರವಿವಾರ ರಾತ್ರಿ ಸಂಭವಿಸಿದೆ. ಶಹಬಾದ್ ಪಟ್ಟಣದ ನಿವಾಸಿ ಸುಭಾಷ ಮುಡದಿ ( 45) ಕೊಲೆಯಾದ ವ್ಯಕ್ತಿ.ಕೊಲೆಗಾರರಿಗಾಗಿ ಪೊಲೀಸರು ತೀವ್ರ ಶೋಧ ನಡೆಸುತ್ತಿದ್ದಾರೆ.ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಯುವ ಮಾರ್ಗ

ಮಂಗಳವಾರ : 19–08–2025

## ವಿಶೇಷಚೇತನರು ಸ್ವಾಭಿಮಾನದ ಬದುಕು ಕಂಡುಕೊಳ್ಳಲು ಕೂಡ್ಲಿಗಿ ಶಾಸಕರ ಸಲಹೆ



**ಕೂಡ್ಲಿಗಿ. ಆ.18–** ವಿಶೇಷಚೇತನರು ಸರ್ಕಾರದ ಸೌಲಭ್ಯಗಳನ್ನು ಪಡೆದುಕೊಳ್ಳುವ ಮೂಲಕ ಸ್ವಾಭಿಮಾನದ ಬದುಕನ್ನು ಕಂಡುಕೊಳ್ಳುವಂತೆ ಸೂಕ್ತ ಸಲಹೆಯನ್ನು ಕೂಡ್ಲಿಗಿ ಶಾಸಕ ಡಾ ಶ್ರೀನಿವಾಸ ತಿಳಿಸಿದರು.

ಅವರು ಪಟ್ಟಣದ ಮಹಾದೇವ ಮೈಲಾರ ಕ್ರೀಡಾಂಗಣದಲ್ಲಿ ಜರುಗಿದ 79 ನೇ ಸ್ವಾತಂತ್ರ್ಯ ದಿನಾಚರಣೆಯ ದಿನದಂದು ಡಿ ಎಂ ಎಫ್ ಯೋಜನೆಯಡಿಯಲ್ಲಿ ತಾಲೂಕಿನ 96 ವಿಶೇಷ ಚೇತನರಿಗೆ ತ್ರಿಚಕ್ರ ವಾಹನ ವಿತರಣೆ ಮಾಡುವ ಸಂದರ್ಭದಲ್ಲಿ ಮಾತನಾಡುತ್ತ ಸರ್ಕಾರದ ಸೌಲಭ್ಯ ಪಡೆದು ಸ್ವಾವಲಂಬಿ ಜೀವನ ನಡೆಸಿ ಸಮಾಜಮುಖಿ ಕಾರ್ಯದಲ್ಲಿ ತೊಡಗಿಕೊಂಡು ಮತ್ತೊಬ್ಬರಿಗೆ ಮಾದರಿಯಾಗಬೇಕಿದೆ. ಸಮಾಜದಲ್ಲಿ ನಾವು ವಿಶೇಷಚೇತನರು ಎಂದು ಅಂದುಕೊಳ್ಳದೆ ನಾನು ಸಹ ಎಲ್ಲರಂತೆ ಬದುಕಿ ಉತ್ತಮಜೀವನ ಕಟ್ಟಿಕೊಳ್ಳುವ ಛಲ ನನ್ನಲಿದೆ ಎಂದು ನಿರ್ಧರಿಸಿ ಸರ್ಕಾರದ ಅನೇಕ ಯೋಜನೆಗಳ ಸದುಪಯೋಗ ಪಡೆದುಕೊಂಡು ಸ್ವಾವಲಂಬಿ ಜೀವನ ನಡೆಸಿ ಸಾರ್ಥಕ ಬದುಕಿಗೆ ಸಾಕ್ಷಿಯಾಗಬೇಕು ಆಗದು ಎಂದು ಎಂದೆಂದೂ ಕುಳಿತುಕೊಳ್ಳಬೇಡಿ ಎಂದು ವಿಶೇಷಚೇತನರಿಗೆ ಶಾಸಕ ಡಾ ಶ್ರೀನಿವಾಸ ಆತ್ಮ ಸ್ಥೈರ್ಯ ತುಂಬಿ ಉಳಿದ ವಿಶೇಷ ಚೇತನರಿಗೆ ತ್ರಿಚಕ್ರವಾಹನ ಸಿಕ್ಕಿಲ್ಲ ಎಂದು ಬೇಜಾರೂಮಾಡಿಕೊಳ್ಳಬೇಡಿ ಮುಂದಿನ ದಿನಗಳಲ್ಲಿ ನಿಮಗೆ ಸಿಗಲಿದೆ ಎಂದು ಸಮಾಧಾನ ಪಡಿಸಿದರು.

ಈ ಸಂದರ್ಭದಲ್ಲಿ ಕೂಡ್ಲಿಗಿ ತಹಸೀಲ್ದಾರ್ ವಿ ಕೆ ನೇತ್ರಾವತಿ, ಕೂಡ್ಲಿಗಿ ಡಿ ವೈ ಎಸ್ಪಿ ಮಲ್ಲೇಶ ದೊಡ್ಡಮನೆ, ಸಿಪಿಐ ಪ್ರಲ್ಹಾದ್ ಆರ್ ಚನ್ನಗಿರಿ, ಪ ಪಂ ಅಧ್ಯಕ್ಷ ಕಾವಲ್ಲಿ ಶಿವಪ್ಪನಾಯಕ,ಉಪಾಧ್ಯಕ್ಷೆ ಲೀಲಾವತಿ ಪ್ರಭಾಕರ, ಸಿಡಿಪಿಒ ಮಾಲಂಬೀ, ಪ ಪಂ ಸದಸ್ಯರು, ಎಂ ಆರ್ ಡಬ್ಲಿಯೂ ಚೌಡೇಶ್ ಮತ್ತು ವಿ ಆರ್ ಡಬ್ಲಿಯೂ ಹಾಗೂ ಇತರರು ಉಪಸ್ಥಿತರಿದ್ದರು.

## ಇಂದು ಸ್ಪಷ್ಟ ನಿರ್ಧಾರಕ್ಕೆ ಬರದಿದ್ದರೆ ಉಗ್ರ ಹೋರಾಟದ ಎಚ್ಚರಿಕೆ

**ಬಳ್ಳಾರಿ, ಆ.18–** ಮುಖ್ಯ ಮಂತ್ರಿ ಸಿದ್ದರಾಮಯ್ಯನವರು ಒಳ ಮೀಸಲಾತಿ ಜಾರಿ ವಿಷಯದಲ್ಲಿ ಕಾಲಾಹರಣ ಮಾಡುವುದನ್ನು ಬದಿಗಿಟ್ಟು ಇಟ್ಟು ತಕ್ಷಣ ಒಳಮೀಸಲಾತಿ ಜಾರಿ ಮಾಡಬೇಕು. ಆಗಸ್ಟ್ 19 ರಂದು ಅಂತಿಮ ನಿರ್ಧಾರ ಪ್ರಕಟಿಸಿ ಒಳಮೀಸಲಾತಿ ಘೋಷಿಸಬೇಕು. ಸಂಪುಟ ಸಭೆಯಲ್ಲಿ ಮತ್ತೊಂದು ಸಮಿತಿ ರಚಿಸಲು ಮುಂದಾದರೆ ಉಗ್ರ ಹೋರಟಕ್ಕೆ ಇಳಿಯಬೇಕಾಗುತ್ತದೆ. ಎಂದು ಮಾದಿಗ ಸಂಘಟನೆಗಳ ಒಕ್ಕೂಟ–ಕರ್ನಾಟಕದ ಜಿಲ್ಲಾ ಘಟಕ ಎಚ್ಚರಿಕೆ ನೀಡಿದೆ.

ಒಕ್ಕೂಟದ ಮುಖಂಡರು ಇಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ. ನ್ಯಾ ನಾಗಮೋಹನ್ ದಾಸ್ ವರದಿ ಸಲ್ಲಿಸಿದ ತರುವಾಯ ಕರೆದಿದ್ದ ವಿಶೇಷ ಸಚಿವ ಸಂಪುಟ ಸಭೆಯನ್ನು ಅಗಸ್ಟ್ 19ಕ್ಕೆ ಮುಂದೆ ಹಾಕಿರುವುದು ಒಳಮೀಸಲಾತಿ ವಿರೋಧಿಗಳಿಗೆ ಸರ್ಕಾರದ ಮೇಲೆ ದಬಾವಣೆ ಮಾಡಲು ಸಮಾಯವಕಾಶ ಕೊಟ್ಟಂತಾಗಿದೆ. ನ್ಯಾ ನಾಗಮೋಹನ್ ದಾಸ್ ಆಯೋಗ ರಚಿಸುವುದು ಮಾದಿಗ ಸಮಾಜದ ಬೇಡಿಕೆಯಾಗಿರಲಿಲ್ಲ. ಆಯೋಗದ ಕಾರ್ಯಕಲಾಪದಲ್ಲಿ ಒಂದೇ ಗುಂಪಿನ ಅಧಿಕಾರಿಗಳೆ ಕಾರ್ಯನಿರ್ವಸಿದ್ದಾರೆ. ಈಗ ಅದೇ ಜನ ವರದಿಯ ಬಗ್ಗೆ ತಕರಾರು ತೆಗೆದು ಸಂಪುಟ ಉಪ–ಸಮಿತಿ ರಚಿಸುವ ಹುನ್ನಾರದ ಹಿಂದೆ ಸಕ್ರಿಯರಾಗಿದ್ದಾರೆ. ಇದು ಒಳ ಮೀಸಲಾತಿ ಕುರಿತಾಗ ಕಾಂಗ್ರೆಸ್ಸಿನ ವಿಳಂಬ ನೀತಿಯನ್ನು ಪ್ರದರ್ಶಿಸುತ್ತದೆ.

ಸಿದ್ದರಾಮಯ್ಯನವರು 2013 ರಿಂದ 2018 ರ ವರೆಗೆ ಮುಖ್ಯ ಮಂತ್ರಿ ಆದಗಲು ಇದೇ ರೀತಿ ವಿಳಂಬ ಮಾಡಿದ್ದರು. ಅವರು 'ಮೂರು' ಸಚಿವರ ಕೈಗೊಂಬೆ ಆಗಿದ್ದಾರೆ. ಸಚಿವ ಸಂಪುಟ ಸಭೆಯನ್ನು ಮುಂದೆ ಹಾಕಿ, ಎಲ್ಲಾ ಜಾತಿ ಉಪ–ಜಾತಿಗಳವರನ್ನು ಬೀದಿಗೆ ಇಳಿಸಿ ಗೊಂದಲ ಹುಟ್ಟು ಹಾಕಲು ಸಂಪುಟದ ಸದಸ್ಯರೇ ಮುಂದಾಗಿದ್ದರೂ ಸಿದ್ದರಾಮಯ್ಯನವರು ಏನು ಮಾಡುತ್ತಿಲ್ಲ. ಕಾಂತರಾಜ್ ಆಯೋಗದ ಹೆಸರಲ್ಲಿ 165 ಕೋಟಿ ಮುಳಿಗಿಸಿದರು ಈಗ ನಾಗ ಮೋಹನ್ ದಾಸ್ ವರದಿಯನ್ನು ತಮ್ಮ ಮೂಗಿನ ನೇರಕ್ಕೆ ತಿದ್ದುಪಡಿ ಮಾಡುವ ಹುನ್ನಾರ ನಡೆದಿದೆ ಎಂದು ಆರೋಪಿಸಿದರು.ಸುದ್ದಿಗೋಷ್ಠಿ ಯಲ್ಲಿ ಒಕ್ಕೂಟದ. ಬಿ. ಇ ರಾಜೇಶ್, ಎಂ ನರಸರಪ್ಪ , ನರಸಿಂಹಬಾಬು , ಎ ಕೆ ಹುಲುಗಪ್ಪ, ಕೃಷ್ಣ, ವೆಂಕಟೇಶ್, ಷಣ್ಮುಖ, ಚೌದರಿ ಸಿನಾ, ಹೊನ್ನೂರಪ್ಪ, ತಿಮ್ಮಪ್ಪ, ಕುರುಬಳ್ಳಿ ಬಾಬು, ಅರುಣಾಚಲಂ, ಶಾಂತಯ್ಯ, ಯರಗುಡಿ ಶಂಕರ್, ಸುಂಕಣ್ಣ, ಪ್ರತಾಪ್, ಮರೆಣ್ಣ ಮಲ್ಲೇಶ್, ಹೆಚ್ ಹುಲಿರಾಜ್, ಮಲ್ಲಿಕಾರ್ಜುನ ಅರಿವಾಣ, ಬಿ ಕೆ ಮಲ್ಲಿಕಾರ್ಜುನ,ಪಂಪಣ್ಣ, ಗಾದಿಲಿಂಗ, ಕೆ ಎಂ ಜನಾರ್ಧನ, ಎಂ ರಾಮಾಂಜಿನಿ, ವಿಶ್ವನಾಥ್ ಶರ್ಮಾ ಮೊದಲಾದವರು ಇದ್ದರು.

# ನೀಲಾದ್ರಿ ಪತ್ತಿನ ಸೌಹಾರ್ದ ಸಹಕಾರಿಗೆ 62 ಲಕ್ಷ ಲಾಭ: ಆರ್.ಬಸವರಾಜ ಶೆಟ್ಟಿ

ಯುವ ಮಾರ್ಗ ಸುದ್ದಿ




**ಮಾನ್ವಿ,ಆ.18–**ಪಟ್ಟಣದ ಬಾಲಾಜಿ ಕಂಫರ್ಟ್ ಸಭಾಂಗಣದಲ್ಲಿ ನೀಲಾದ್ರಿ ಪತ್ತಿನ ಸೌಹಾರ್ದ ಸಹಕಾರಿ ಸಂಘದ 13 ನೇ ವಾರ್ಷಿಕ ಮಹಾಸಭೆ ಕಾರ್ಯಕ್ರಮವನ್ನು ಸಹಕಾರಿಯ ಅಧ್ಯಕ್ಷರಾದ ಆರ್.ಬಸವರಾಜ ಶೆಟ್ಟಿ ಉದ್ಘಾಟಿಸಿ ಮಾತನಾಡಿ ಸಹಕಾರಿಯು ಕಳೆದ 13 ವರ್ಷಗಳಿಂದ ಸಹಕಾ ರಿಯ ಸದಸ್ಯರಿಗೆ ಉಳಿತಾಯದೊಂದಿಗೆ ಅಗತ್ಯ ಅರ್ಥಿಕ ನೆರವನ್ನು ನೀಡುತ್ತ ಬಂದಿದೆ ಜೋತೆಗೆ ತಾಲೂಕಿನ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯವಿರುವ ಕಲಿಕಾ ಸಾಮಾಗ್ರಿಗಳನ್ನು ಕೂಡ ವಿತರಿಸಲಾಗುತ್ತಿದೆ. ಹಾಗೂ ವಿದ್ಯಾರ್ಥಿಗಳಿಗೆ ಅರ್ಥಿಕ ನೇರವು, ಸೇರಿದಂತೆ ಅನೇಕ ಸಮಾಜಿಕ ಕಾರ್ಯಗಳಲ್ಲಿ ಸಹಕಾರಿ ತನ್ನನ್ನು ತೊಡಗಿಸಿಕೊಳ್ಳುವುದರೊಂದಿಗೆ ಈ ಸಾಲಿನಲ್ಲಿ ಸಹಕಾರಿಯು 91 ಲಕ್ಷ ಷೇರು ಬಂಡವಾಳ, 5 ಕೋಟಿ ನಿಧಿ, 35 ಕೋಟಿ ಠೇವಣಿ, 41 ಕೋಟಿ ದುಡಿಯುವ ಬಂಡವಾಳ ಹೊಂದಿದ್ದು ಸದಸ್ಯರಿಗೆ ವಿವಿಧ ಯೋಜನೆಗಳಡಿಯಲ್ಲಿ 28 ಕೋಟಿ 62 ಲಕ್ಷ ಸಾಲ ಮತ್ತು ಮುಂಗಡವನ್ನು ನೀಡಲಾಗಿದೆ ಈ ಸಾಲಿನಲ್ಲಿ ಸಹಕಾರಿಯು 62 ಲಕ್ಷ ಲಾಭ ವನ್ನು ಹೊಂದಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸುತ್ತಿರುವ ಯೋಧ ದುರ್ಗ ಪ್ರಸಾದ್, ಸೇನೆಯಲ್ಲಿ ವೈದ್ಯರಾಗಿ ಸೇವೆ ಸಲ್ಲಿಸುತ್ತಿರುವ ಸಿ.ಅನಿರುದ್ಧ್ ರವರ ತಂದೆ ಸಿ.ರಾಮಾಂಜನೇಯ್ಯ ರವರನ್ನು ಸನ್ಮಾನಿಸಿ ಗೌರವಿಸ ಲಾಯಿತು. ಸರ್ಕಾರಿ ಕಾಲೇಜಿನ ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಸಹಕಾರಿಯ ಉಪಾಧ್ಯಕ್ಷರಾದ ಪಿ.ಕೃಷ್ಣಯ್ಯಶೆಟ್ಟಿ, ನಿರ್ದೇಶಕರಾದ ಇ.ಆಂಜನೇಯ್ಯಶೆಟ್ಟಿ,ಆರ್. ಹನುಮೇಶಶೆಟ್ಟಿ, ಇ.ಶ್ರೀನಿವಾಸ, ಕೆ.ಚನ್ನಬಸವ, ಸೈಯಾದ್ ಹಬೀಬುಲ್ ಹುಸೇನಿ ಮತ್ವಾಲೆ, ಆರ್.ಬದ್ರಿನಾಥ ಶೆಟ್ಟಿ,ಅಯ್ಯಪ್ಪನಾಯಕ,ಟಿ. ಪುರುಷೋತ್ತಮ್,ಬಿ.ಸುಮಲತ ಪ್ರಲ್ಹದ್ ಶೆಟ್ಟಿ, ರಾಮಯ್ಯ ಶೆಟ್ಟಿ,ಆರ್. ವಿದ್ಯಾಸಾಗರ ಶೆಟ್ಟಿ, ರಾಮಣ್ಣ,ಕುಮಾರಸ್ವಾಮಿ ,ಗಿರೀಶ್ ಜೋಶಿ, ಆರ್.ಕೃಷ್ಣಯ್ಯಶೆಟ್ಟಿ, ಕಾನೂನು ಸಲಹೆಗಾರರಾದ ರವಿಕುಮಾರ ಪಾಟೀಲ್ ವಕೀಲರು,ಅರವಿಂದ ದೇಸಾಯಿ, ಸಿ.ಇ.ಓ. ಸಿಂಗಪೂರ್ ಗುರುರಾಜ ಶೆಟ್ಟಿ, ಅಧಿಕಾರಿಗಳಾದ ರವಿಕುಮಾರ, ಚನ್ನಬಸವ ಸೇರಿದಂತೆ ಸಹಕಾರಿಯ ಸದಸ್ಯರು, ಸಿಬ್ಬಂ ದಿಗಳು ಇದ್ದರು.

# ನಿಧಾನಗತಿಯ ಮಕ್ಕಳ ಕಲಿಕೆಗೆ ಪ್ರಥಮ ಆದ್ಯತೆ ನೀಡಿ: ಚಂದ್ರಶೇಖರ ದೊಡ್ಡಮನಿ

ಯುವ ಮಾರ್ಗ ಸುದ್ದಿ



**ಮಾನ್ವಿ,ಆ.18–**ಎಸ್ಎಸ್ಎಲ್ಸಿ ಫಲಿತಾಂಶ ಸಾಧನೆಗಾಗಿ ಶಿಕ್ಷಣ ಇಲಾಖೆ ಕೈಗೊಂಡಿರುವ ಕಾರ್ಯಕ್ರಮಗಳ ಅನುಷ್ಠಾನದ ಜೊತೆಗೆ ನಿಧಾನಗತಿಯ ಮಕ್ಕಳ ಕಲಿಕೆಗೆ ವಿಶೇಷ ಆದ್ಯತೆ ನೀಡಬೇಕೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ದೊಡ್ಡಮನಿ ಹೇಳಿದರು.

ಬಾಲಕರ ಸರ್ಕಾರಿ ಪ್ರೌಢಶಾಲೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಮಾನ್ವಿ ವತಿಯಿಂದ ಹಮ್ಮಿಕೊಂಡಿದ್ದ ಎಸ್ಎಸ್ಎಲ್ಸಿ ಫಲಿತಾಂಶ ಸುಧಾರಣೆಗಾಗಿ ವಿಷಯ ಶಿಕ್ಷಕರ (ಸರ್ಕಾರಿ, ಅನುದಾನಿತ,ಅನುದಾನ ರಹಿತ ಮತ್ತು ವಸತಿ ಶಾಲೆಗಳ ಶಿಕ್ಷಕರಿಗೆ) ತರಬೇತಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಕಳೆದ ಬಾರಿಯ ಎಸ್ಎಸ್ಎಲ್ಸಿ ಫಲಿತಾಂಶದಲ್ಲಿ ನಮ್ಮ ಜಿಲ್ಲೆಯ ಫಲಿತಾಂಶ ಕುಸಿತ ಹಿನ್ನೆಲೆಯಲ್ಲಿ ಶಿಕ್ಷಣ ಇಲಾಖೆ ಫಲಿತಾಂಶ ಸುಧಾರಣೆಗಾಗಿ 29 ಅಂಶಗಳ ಅನುಷ್ಠಾನದ ಜೊತೆಗೆ ಎಫ್ಎಲ್ಎನ್,ಎಲ್ಬಿಎ ಪರೀಕ್ಷೆಯ ಕಾರ್ಯಕ್ರಮಗಳ ಮೂಲಕ ನಿಧಾನ ಗತಿಯ ಕಲಿಕಾ ಮಕ್ಕಳನ್ನು ಗುರುತಿಸಿ ಅಂತಹ ಮಕ್ಕಳಿಗೆ ಪರಿಹಾರ ಬೋಧನೆ ಮತ್ತು ವಿಶೇಷ ತರಗತಿಯನ್ನು ಹಮ್ಮಿಕೊಳ್ಳುವ ಮೂಲಕ ಈಬಾರಿಯ ಎಸ್ಎಸ್ಎಲ್ಸಿ ಫಲಿತಾಂಶ ಸುಧಾರಣೆಯ ಗುರಿಯನ್ನು ಪ್ರತಿಯೊಬ್ಬ ಶಿಕ್ಷಕರು ಸಾಧಿಸಬೇಕಿದೆ.

ಈ ನಿಟ್ಟಿನಲ್ಲಿ ಮಕ್ಕಳ ಪಾಲಕರು ಕೂಡ ಶಿಕ್ಷಕರಿಗೆ ಸಹಕರಿಸುವ ಮೂಲಕ ಮಕ್ಕಳ ಕಲಿಕೆಗೆ ಮನೆಯಲ್ಲಿ ಉತ್ತಮವಾದ ವಾತಾವರಣವನ್ನು ಕಲ್ಪಿಸುವದು ಪಾಲಕರ ಜವಬ್ದಾರಿಯಾಗಿದೆ ಎಂದರು. ನಂತರ ನೂಡಲ್ ಅಧಿಕಾರಿ ಹಾಗೂ ಡಾಯಟ್ ಹಿರಿಯ ಉಪನ್ಯಾಸಕ ಜೀವನ್ ಸಾಬ್ ಮಾತನಾಡಿ, ಎಫ್ಎಲ್ಎನ್ ನ ಆಧಾರಿತ ಕಲಿಕಾ ಫಲಗಳು ಮಕ್ಕಳಲ್ಲಿ ಕಲಿಕಾ ಸಾಮಾರ್ಥ್ಯವನ್ನು ಹೆಚ್ಚಿಸುವ ಮೂಲಕ ಉದ್ದೇಶಗಳನ್ನು ಹೊಂದಿದ್ದು, ಆರಂಭಿಕ ಕಲಿಕಾ ಅಂಶಗಳಾದ ಅಕ್ಷರ ಮತ್ತು ಸಂಖ್ಯೆಯ ಜ್ಞಾನವನ್ನು ಮಕ್ಕಳಲ್ಲಿ ಬೆಳಸಬೇಕಿದೆ. ಈಗಾಗಲೇ ಜಿಲ್ಲೆಯಲ್ಲಿ ಶೇ.29ರಷ್ಟು ಮಕ್ಕಳು ಎಫ್ಎಲ್ಎನ್ ಸಾಧಿಸಿದ್ದು, ಇನ್ನೂ ಶೇ.71ರಷ್ಟು ಮಕ್ಕಳು ಎಫ್ಎಲ್ಎನ್ ಸಾಧಿಸಿಲ್ಲ. ಎಫ್ಎಲ್ಎನ್ ಸಾಧಿಸದ ಮಕ್ಕಳ ಬಗ್ಗೆ ಶಿಕ್ಷಕರು ಹೆಚ್ಚಿನ ಕಲಿಕೆಗೆ ಉತ್ತೇಜನ ನೀಡಬೇಕು ಎಂದರು.

ಈ ಸಂದರ್ಭದಲ್ಲಿ ಕ್ಷೇತ್ರ ಸಮನ್ವಯ ಅಧಿಕಾರಿ ಕುಬೇರ, ಶಿಕ್ಷಣ ಸಂಯೋಜಕರಾದ ಎಂ.ಡಿ.ಯೂನಸ್ , ಬಿಆರ್ಪಿ ನಾಗಪ್ಪ ಹಾಗೂ ವಿಷಯ ಸಂಪನ್ಮೂಲ ವ್ಯಕ್ತಿಗಳಾದ ಮಹಿಬೂಬ್ ಪಾಷ ಕುರ್ಡಿ,ದ್ಯಾವಪ್ಪ, ಮಂಜುಳಾ,ಪ್ರಮೋದ್, ರಜಿನಿ, ದ್ರಾಕ್ಷಾಯಿಣಿ,ಯಶೋಧ, ನಾಗವೆನಿತಾ,ಶ್ರೀ ಸುಧಾ ಹಾಗೂ ವಿವಿಧ ಶಾಲೆಗಳ ಅತಿಥಿ ಶಿಕ್ಷಕರು, ಖಾಸಗಿ ಶಾಲೆ ಶಿಕ್ಷಕರು ಉಪಸ್ಥಿತ ರಿದ್ದರು.

# ವಾರ್ಡ ನಂ 12 ಉಪಚುನಾವಣೆ; ಶೇ 69 ರಷ್ಟು ಶಾಂತಿಯುತ ಮತದಾನ

ಯುವ ಮಾರ್ಗ ಸುದ್ದಿ



**ಸಿರವಾರ,ಆ.18–**ಸಿರವಾರ ಪಟ್ಟಣ ಪಂಚಾಯತಿಯ ವಾರ್ಡ ನಂಬರ್ 12ರ ಉಪಚುನಾವಣೆಗೆ ಭಾನುವಾರ ಬೆಳಿಗ್ಗೆಯಿಂದ ಮತದಾನ ನಡೆಯಿತು.

ಮಾಜಿ ತಾ.ಪಂ. ಅಧ್ಯಕ್ಷ ದಾನನಗೌಡ ಅವರ ತಾಯಿ ಅಮರಮ್ಮ ಅವರ ನಿಧನದಿಂದ ತೆರವಾಗಿದ್ದ ಸ್ಥಾನಕ್ಕೆ ಉಪಚುನಾವಣೆ ನಿಗಧಿಯಾಗಿತ್ತು ಕಾಂಗ್ರೆಸ್ ಪಕ್ಷದಿಂದ ಜ್ಯೋತಿ ದಾನನಗೌಡ, ಬಿಜೆಪಿಯಿಂದ ಹುಸೇನಮ್ಮ ಹಾಗೂ ಜೆಡಿಎಸ್‌ನಿಂದ ಮಾಳಮ್ಮ ಸ್ಪರ್ಧೆಯಲ್ಲಿದ್ದು, ಭಾನುವಾರ ಬೆಳಿಗ್ಗೆಯಿಂದ ತುರುಸಿನ ಮತದಾನ ನಡೆಯಿತು, ಒಟ್ಟು 749 ಮತದಾರರಲ್ಲಿ ಸಂಜೆ ವೇಳೆಗೆ 522 ಮತದಾರರು ತಮ್ಮ ಹಕ್ಕು ಚಲಾಯಿಸಿದ್ದು ಇದರಲ್ಲಿ 254 ಪುರುಷ ಮತದಾರರು, 267 ಮಹಿಳಾ ಮತದಾರರು ಮತದಾನ ಮಾಡಿದ್ದಾರೆ, ಒಟ್ಟಾರೆ ಶೇ 69.69 ರಷ್ಟು ಶಾಂತಿಯುತ ಮತದಾನವಾಗಿದೆ. ಎಂದು ಚುನಾವಣೆ ಅದಿಕಾರಿ ದೇವೆಂದ್ರ ನಾಯ್ಕ್, ಉಪಚುನಾವಣೆ ಅದಿಕಾರಿ ಶ್ರೀನಿವಾಸ ಹೇಳಿದರು.

ಪ.ಪಂಚಾಯತಿ ಅದ್ಯಕ್ಷ ವೈ.ಭೂಪನಗೌಡ, ತಾ.ಪಂ ಮಾಜಿ ಅದ್ಯಕ್ಷ ದಾನನಗೌಡ ಮತದಾನ ಮಾಡಿದರು. ಮತದಾನ ಕೇಂದ್ರಕ್ಕೆ ತಹಶಿಲ್ದಾರರ ಅಶೋಕಪವಾರ ಮತ್ತು ಮುಖ್ಯಾಧಿಕಾರಿ ಸುರೇಶ ಶೆಟ್ಟಿ ಬೇಟಿ ನೀಡಿ ವೀಕ್ಷಣೆ ಮಾಡಿದರು. ಸಿಪಿಐ ಶಶಿಕಾಂತ ಎಂ, ಪಿಎಸ್ಐ ಅಮರೇಗೌಡ ಸೂಕ್ತ ಬಂದೋಬಸ್ತ ಒದಗಿಸಿದರು

# ಸಸ್ಯಕಾಶಿ ಲಾಲ್‌ಬಾಗ್ ಫಲಪುಷ್ಪ ಪ್ರದರ್ಶನಕ್ಕೆ ತೆರೆ



**ಬೆಂಗಳೂರು,ಆ.18–** ಸಸ್ಯಕಾಶಿ ಲಾಲ್‌ಬಾಗ್‌ನಲ್ಲಿ ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ನಡೆದ ಫಲಪುಷ್ಪ ಪ್ರದರ್ಶನಕ್ಕೆ ಇಂದು ತೆರೆ ಬಿದ್ದಿದೆ. ವೀರವನಿತೆ ಕಿತ್ತೂರು ರಾಣಿ ಚೆನ್ನಮ ಹಾಗೂ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ವಿಷಯಾಧಾರಿತ ಫಲಪುಷ್ಪ ಪ್ರದರ್ಶನದ ಮೂಲಕ ಈ ಬಾರಿ ಜನರನ್ನು ಆಕರ್ಷಿಸಿದ್ದ ಪ್ರದರ್ಶನಕ್ಕೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಒಟ್ಟಾರೆ 67.310 ಮಂದಿ ಕಣ್ತುಂಬಿಕೊಂಡಿದ್ದು ಇಂದು ತೆರೆಬಿದ್ದಿದೆ.

ಭಾನುವಾರ ರಜೆ ಹಿನ್ನೆಲೆಯಲ್ಲಿ ತುಂತುರು ಮಳೆಯ ನಡುವೆಯೂ ಸಹಸ್ರಾರು ಜನರು ಸಸ್ಯಕಾಶಿಗೆ ಭೇಟಿ ನೀಡಿ, ಹೂವಿನಲ್ಲಿ ಮೂಡಿದ್ದ ಕಲಾಕೃತಿಗಳನ್ನು ವೀಕ್ಷಿಸಿ ಸಂಭ್ರಮಿಸಿದರು. ನಿನ್ನೆ ಒಂದೇ ದಿನ 37.39 ಲಕ್ಷ ಆದಾಯ ಸಂಗ್ರಹವಾಗಿದೆ. ಮಳೆಯ ನಡುವೆಯೂ 52,150 ಮಂದಿ ವಯಸ್ಕರು, 7.960 ಮಕ್ಕಳು ಭೇಟಿ ನೀಡಿದ್ದಲ್ಲದೆ ಶಾಲಾ ಸಮವಸ್ತ್ರದಲ್ಲಿ ಬಂದಿದ್ದ 7,200 ಮಕ್ಕಳಿಗೆ ಉಚಿತ ಪ್ರದರ್ಶನ ಕಲ್ಪಿಸಲಾಗಿತ್ತು.ಇಂದು ಫಲಪುಷ್ಪ ಪ್ರದರ್ಶನಕ್ಕೆ ಅಂತಿಮ ದಿನವಾಗಿದ್ದು, ಬೆಳಿಗ್ಗೆ 9 ರಿಂದ ಸಂಜೆ 6.30ರವರೆಗೆ ಪ್ರದರ್ಶನವಿರಲಿದೆ. ವಾರದ ದಿನವಾದ್ದರಿಂದ ವಯಸ್ಕರಿಗೆ 80 ರೂ., ಮಕ್ಕಳಿಗೆ 30 ರೂ. ಶುಲ್ಕವಿರಲಿದೆ ಎಂದು ತೋಟಗಾರಿಕಾ ಇಲಾಖೆಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಪ್ರಧಾನಮಂತ್ರಿ ಆವಾಸ್ ಯೋಜನೆಯ ಮನೆಗಾಗಿ ಆಗಸ್ಟ್ 20ರಂದು ಸಭೆ

**ರಾಯಚೂರು,ಆ.18–**ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ ಜಾರಿಯಲ್ಲಿರುವ ಪ್ರಧಾನಮಂತ್ರಿ ಆವಾಸ್ ಯೋಜನೆಯ ಉಪ ಘಟಕ ಎ.ಹೆಚ್.ಪಿಆರ್ಡಿ 2,419 ಮನೆಗಳಿಗೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ ಪಂಗಡ ವರ್ಗದ ಫಲಾನುಭವಿಗಳನ್ನು ಆಯ್ಕೆ ಮಾಡುವ ಸಲುವಾಗಿ ಆಗಸ್ಟ್ 20ರ ಬೆಳಿಗ್ಗೆ 11.30ಕ್ಕೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಭೆ ಹಮ್ಮಿಕೊಳ್ಳಲಾಗಿದ್ದು, ಸಭೆಗೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ

ಪಂಗಡಗಳ ಅಭಿವೃದ್ಧಿ ಪರ ಸಂಘ–ಸಂಸ್ಥೆಗಳ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು ಭಾಗವಹಿಸಿ ಯಶಸ್ವಿಗೊಳಿಸಿಬೇಕೆಂದು ಕೋರಲಾಗಿದೆ.

ಪ್ರಧಾನಮಂತ್ರಿ ಆವಾಸ್ ಯೋಜನೆಯ ಉಪಘಟಕ ಎ.ಹೆಚ್.ಪಿ ರಡಿ ಒಟ್ಟು 2,419 ಮನೆಗಳ ನಿರ್ಮಾಣ ಜಾರಿಯಲ್ಲಿ ಇರುತ್ತದೆ. ಇದರಲ್ಲಿ ನಗರದ ಬಡ ವಸತಿ ರಹಿತರಿಗೆ ಸೌಲಭ್ಯ ಕಲ್ಪಿಸುವ ಅತಿ ಮಹತ್ವಾಕಾಂಕ್ಷಿ ಯೋಜನೆಯಾಗಿದೆ. ಪ.ಜಾತಿ ವರ್ಗದವರಿಗೆ 951 ಹಾಗೂ ಪ.ಪಂಗಡ ವರ್ಗದವರಿಗೆ 1,053 ಮನೆಗಳು ಒಟ್ಟು 2,400 ಗುರಿ ನಿಗದಿಯಾಗಿದೆ. ಆದರೆ ಈ ವರ್ಗದಿಂದ ಇದುವರೆಗೂ ನೀರಿಕ್ಷತ ಮಟ್ಟದಲ್ಲಿ ಅರ್ಜಿಗಳು ಬಂದಿರುವುದಿಲ್ಲ.

ಈ ಇಂತಹ ಮಹತ್ವಪೂರ್ಣ ಯೋಜನೆಯಡಿ ಬಡ ವಸತಿ ರಹಿತ ಪ.ಜಾತಿ ಪ.ಪಂಗಡದ ವರ್ಗದವರಿಗೆ ವಸತಿ ಸೌಲಭ್ಯ ಕಲ್ಪಿಸುವುದು ಅಗತ್ಯವಾಗಿದೆ. ಈ ವರ್ಗದವರಿಂದ ಅರ್ಜಿ ಪಡೆದು ಯೋಜನೆ ಯಶಸ್ವಿಗೊಳಿಸುವುದು ಅಗತ್ಯವಾಗಿದ್ದು, ಈ ಕುರಿತು ಚರ್ಚಿಸಲು ಪಾಲಿಕೆಯ ಆಯಕ್ತರ ಅಧ್ಯಕ್ಷತೆಯಲ್ಲಿ ಸಭೆ ಹಮ್ಮಿಕೊಳ್ಳಲಾಗಿದೆ. ಈ ಸಭೆಗೆ ನಗರದ ಪರಿಶಿಷ್ಟ

ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ಪರ ಸಂಘ ಸಂಸ್ಥೆಗಳ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಾಗುವಂತೆ ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ಆಗಸ್ಟ್ 20ರಿಂದ 22ರವರೆಗೆ ಪುಸ್ತಕಗಳ ಪ್ರದರ್ಶನ

**ರಾಯಚೂರು,ಆ.18–**ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ 2022ರಲ್ಲಿ ಪ್ರಥಮ ಮುದ್ರಣಗೊಂಡು ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಯಾದ ಮತ್ತು ಆಯ್ಕೆಯಾಗದ ಪುಸ್ತಕಗಳ ಪ್ರದರ್ಶನವನ್ನು ಬೆಂಗಳೂರಿನ ಡಾ.ವಿಷ್ಣುವರ್ಧನ ಸ್ಪರ್ಧಾತ್ಮಕ ಪರೀಕ್ಷೆಗಳ ಅಧ್ಯಯನ ಕೇಂದ್ರ, ಎಂ.ಸಿ.ಬಡಾವಣೆ ಡಾ.ಬಾಲಗಂಗಾಧರನಾಥ ಸ್ವಾಮೀಜಿ ಮಲ್ಟಿಸ್ಪೆಶಾಲಿಟಿ ಆಸ್ಪತ್ರೆ ಹತ್ತಿರ ವಿಜಯನಗರ ಬೆಂಗಳೂರು–560040 ನಲ್ಲಿ ಆಗಸ್ಟ್ 20ರಿಂದ 22ರವರೆಗೆ ಏರ್ಪಡಿಸಲಾಗಿದೆ.

ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಸ್ವೀಕರಿಸಿದ ಪುಸ್ತಕಗಳನ್ನು ಆಯ್ಕೆ ಸಮಿತಿಯು ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಿದ್ದು, ಆಯ್ಕೆಯಾದ ಮತ್ತು ಆಯ್ಕೆಯಾಗದ ಪುಸ್ತಕಗಳ ಪ್ರದರ್ಶನವನ್ನು ಏರ್ಪಡಿಸಲಾಗಿದೆ. ಇಲಾಖೆಯ ಜಾಲತಾಣ ವಿಳಾಸ: ಜಠಿಟ.ಇಚಿಡಿಟಿಚಿಣಚಿಞಚಿ.ರಠತ.ಎಟಿ ನಲ್ಲಿ ಪ್ರಕಟಿಸಲಾಗುತ್ತಿದೆ.

ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಸಲ್ಲಿಸಿದ ಲೇಖಕರು, ಲೇಖಕ–ಪ್ರಕಾಶಕರು, ಪ್ರಕಾಶಕರು ಮತ್ತು ಪುಸ್ತಕ ಮಾರಾಟಗಾರರು ಆಕ್ಷೇಪಣೆಗಳಿದ್ದಲ್ಲಿ ಆಗಸ್ಟ್ 30ರೊಳಗಾಗಿ ಆಯುಕ್ತರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, 4ನೇ ಮಹಡಿ, ಡಾ:ಅಂಬೇಡ್ಕರ್ ವೀದಿ, ಬೆಂಗಳೂರು–560001. ಇಲ್ಲಿಗೆ ಲಿಖಿತವಾಗಿ ಮನವಿಗಳನ್ನು ಸಲ್ಲಿಸಬಹುದಾಗಿದೆ. ಅವದಿ ಮುಗಿದ ನಂತರ ಬಂದ ಮನವಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ ಎಂದು ರಾಯಚೂರು ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯಾಧಿಕಾರಿಗಳಾದ ನಿರ್ಮಲಾ ಹೆಚ್.ಹೊಸೂರು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೆಹಲಿಯ ಮೂರು ಶಾಲೆಗಳಿಗೆ ಬಾಂಬ್ ಬೆದರಿಕೆ




**ನವದೆಹಲಿ, ಆ.18–** ದೆಹಲಿಯ ದ್ವಾರಕಾ ಪ್ರದೇಶದ ಮೂರು ಶಾಲೆಗಳಿಗೆ ಇಂದು ಬೆಳಿಗ್ಗೆ ಇ–ಮೇಲ್ ಮೂಲಕ ಬಾಂಬ್ ಬೆದರಿಕೆ ಬಂದಿದೆ.ಇದು ವಿದ್ಯಾರ್ಥಿಗಳಲ್ಲಿ ಭೀತಿ ಮೂಡಿಸಿದ್ದು, ಕೂಡಲೇ ಮಕ್ಕಳನ್ನು ಹೊರಗೆ ಕಳುಹಿಸಿದ್ದಾರೆ.

ದೆಹಲಿ ಪಬ್ಲಿಕ್ ಸ್ಕೂಲ್ (ಡಿಪಿಎಸ್), ಮಾಡ್ರನ್ ಕಾನ್ವೆಂಟ್ ಸ್ಕೂಲ್ ಮತ್ತು ಶ್ರಿ ರಾಮ್ ವರ್ಲ್ಡ್ ಸ್ಕೂಲ್ ಈ ಬೆದರಿಕೆ ಕರೆ ಬಂದಿದೆ ಎಂದು ಹಿರಿಯ ಪೊಲೀಸ್? ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ದೆಹಲಿ ಪೊಲೀಸರು,ಬಾಂಬ್ ನಿಷ್ಕ್ರಿಯ ದಳ ಮತ್ತು ಶ್ವಾನ ದಳದ ತಂಡಗಳು ಸ್ಥಳಕ್ಕೆ ಧಾವಿಸಿ ಶಾಲೆಗಳಲ್ಲಿ ಶೋಧ ಕಾರ್ಯಾಚರಣೆ ನಡೆಸಿದ್ದಾರೆ.

ದುಷ್ಕರ್ಮಿಗಳು ಬೆದರಿಕೆ ಸಂದೇಶ ಕಳಿಸಿರುವ ಐಪಿ ವಿಳಾಸವನ್ನು ಪತ್ತೆಹಚ್ಚಲು ಸೈಬರ್ ತಂಡಗಳು ಕಾರ್ಯನಿರ್ವಹಿಸುತ್ತಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H